ಸಂಪುಟ 01 | ಸಂಚಿಕೆ 160 | ಭಾನುವಾರ 03 ಮೇ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ
REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ಪತ್ರಿಕಾ ಸ್ವಾತಂತ್ರ್ಯ ದಿನ**

ಪ್ರತಿ ವರ್ಷ ಮೇ 3 ರಂದು ವಿಶ್ವದಾದ್ಯಂತ ಪತ್ರಿಕಾ ಸ್ವಾತಂತ್ರ್ಯವನ್ನು ಮೌಲ್ಯಮಾಪನ ಮಾಡಲು ಮತ್ತು ತಮ್ಮ ವೃತ್ತಿಯ ಸಂದರ್ಭದಲ್ಲಿ ಪ್ರಾಣ ಕಳೆದುಕೊಂಡ ಪತ್ರಕರ್ತರಿಗೆ ಗೌರವ ಸಲ್ಲಿಸಲು ಪತ್ರಿಕಾ ಸ್ವಾತಂತ್ರ್ಯ ದಿನ ಅಥವಾ ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನವನ್ನು ಆಚರಿಸಲಾಗುತ್ತದೆ.

**2) ವಿಶ್ವ ನಗು ದಿನ**

ವಿಶ್ವ ನಗು ದಿನ (ಮೇ ತಿಂಗಳ ಮೊದಲ ಭಾನುವಾರ) ಪ್ರತಿ ವರ್ಷ ಮೇ ತಿಂಗಳ ಮೊದಲ ಭಾನುವಾರದಂದು ವಿಶ್ವ ನಗು ದಿನವನ್ನು ಆಚರಿಸಲಾಗುತ್ತದೆ. 1998 ರಲ್ಲಿ, ಮೊದಲ ಆಚರಣೆಯು ಭಾರತದ ಮುಂಬೈನಲ್ಲಿ ನಡೆಯಿತು. ಇದನ್ನು ವಿಶ್ವಾದ್ಯಂತ ನಗು ಯೋಗ ಚಳವಳಿಯ ಸಂಸ್ಥಾಪಕ ಡಾ. ಮದನ್ ಕಟಾರಿಯಾ ಅವರು ಏರ್ಪಡಿಸಿದ್ದರು.

## ಸುಭಾಷಿತ

ನಿಮ್ಮನ್ನು ನೀವು ದುರ್ಬಲರೆಂದು ತಿಳಿದುಕೊಳ್ಳುವುದು ಅತಿದೊಡ್ಡ ಪಾಪ.

–ಸ್ವಾಮಿ ವಿವೇಕಾನಂದ

# ಕಾಂಗ್ರೆಸ್ ಹೈಕಮಾಂಡ್ ಚಿತ್ತ ಕೇರಳ ರಾಜ್ಯದತ್ತ



**ಬೆಂಗಳೂರು: 2028 ರ ವಿಧಾನಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು, ಕರ್ನಾಟಕದಲ್ಲಿ ನಾಯಕತ್ವ ಬದಲಾವಣೆಯ ಬಗ್ಗೆ ಕಾಂಗ್ರೆಸ್ ಹೈಕಮಾಂಡ್ ಅತಿ ಎಚ್ಚರಿಕೆಯಿಂದ ಹೆಜ್ಜೆಯಿಡುವ ಸಾಧ್ಯತೆಯಿದೆ, ಆಡಳಿತ ವಿರೋಧಿ ಅಲೆಯನ್ನು ಹೋಗಲಾಡಿಸುವುದು ಕಾಂಗ್ರೆಸ್ ಮುಂದಿರುವ ಸದ್ಯದ ಬಹುದೊಡ್ಡ ಸಮಸ್ಯೆಯಾಗಿದೆ.**

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ನೇತೃತ್ವದ ಯಾವುದೇ ಬಣಗಳ ಒತ್ತಡಕ್ಕೆ ಪಕ್ಷದ ಹೈಕಮಾಂಡ್ ಮಣಿಯುವ ಸಾಧ್ಯತೆಯಿಲ್ಲ, ಜಾತಿ ಸಂಯೋಜನೆ ಮತ್ತು ಗೆಲುವಿನ ಆಧಾರದ ಮೇಲೆ ಸೂತ್ರವನ್ನು ರೂಪಿಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ. ಕಾಂಗ್ರೆಸ್ ಸಂಸದೀಯ ಪಕ್ಷದ ಮುಖ್ಯಸ್ಥೆ ಸೋನಿಯಾ ಗಾಂಧಿ ಮತ್ತು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸೇರಿದಂತೆ ಉನ್ನತ ನಾಯಕರು, ಸಿದ್ದರಾಮಯ್ಯ ಅವರನ್ನು ಪಕ್ಷದ ಅಹಿಂದ ಮುಖವಾಗಿ ಮತ್ತು ಡಿಕೆ ಶಿವಕುಮಾರ್ ಅವರನ್ನು ಕೆಪಿಸಿಸಿ ಅಧ್ಯಕ್ಷರನ್ನಾಗಿ ಮುಂದುವರಿಸುವ ಮೂಲಕ ಯಥಾಸ್ಥಿತಿ ಕಾಯ್ದುಕೊಳ್ಳು ಬಯಸಿದ್ದಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಒಮ್ಮತದ ಸಿಎಂ ಅಭ್ಯರ್ಥಿಯಾಗಿ ಆಯ್ಕೆ ಮಾಡಿ ಕಳುಹಿಸಲು ಹೈಕಮಾಂಡ್ ನಿರ್ಧರಿಸಿದೆ ಎಂದು ಹೇಳಲಾಗುತ್ತಿದೆ.

ಮೇ 4 ರಂದು ಹೊರ ಬೀಳುವ ಐದು ರಾಜ್ಯಗಳ ವಿಧಾನಸಭೆಗಳ ಫಲಿತಾಂಶವು ಸಹ ಈ ನಿರ್ಧಾರದ ಮೇಲೆ ಪರಿಣಾಮ ಬೀರುತ್ತದೆ. ಕೇರಳವನ್ನು ಗೆದ್ದು ಯುಡಿಎಫ್ ಸರ್ಕಾರವನ್ನು ರಚಿಸಿದರೆ ಪಕ್ಷದ ಹೈಕಮಾಂಡ್ ಅಲ್ಲಿ ಕಾರ್ಯನಿರತವಾಗುವ ಸಾಧ್ಯತೆಯಿದೆ. ಯುಡಿಎಫ್ ಬಹುಮತ ಪಡೆದರೆ ಕೇರಳ ಮುಖ್ಯಮಂತ್ರಿಯ ಸಮಸ್ಯೆಯನ್ನು ಹೈಕಮಾಂಡ್ ಪರಿಹರಿಸಬೇಕು, ಆದ್ದರಿಂದ ಕರ್ನಾಟಕದ ನಾಯಕತ್ವದ ಸಮಸ್ಯೆಯನ್ನು ನಿಭಾಯಿಸುವುದು ಆದ್ಯತೆಯಾಗಿರುವುದಿಲ್ಲ ಎಂದು ಕಾಂಗ್ರೆಸ್ ನಾಯಕರೊಬ್ಬರು ತಿಳಿಸಿದ್ದಾರೆ.


ಸಿದ್ದರಾಮಯ್ಯ ಪಾಳಯವು ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರನ್ನು ದಲಿತ ಕೋಟಾದಡಿಯಲ್ಲಿ ಭವಿಷ್ಯದ ಮುಖ್ಯಮಂತ್ರಿಯನ್ನಾಗಿ ಬಿಂಬಿಸಲು ಪ್ರಯತ್ನಿಸುತ್ತಿತ್ತು. ಕೆಲವು ದಿನಗಳ ಹಿಂದೆ, ಖರ್ಗೆ ಸಿಎಂ ಆಗುವ ವಿಚಾರವನ್ನು ಸ್ವಾಗತಿಸಿದ್ದರು, ಪಕ್ಷದ ನಾಯಕರು ಅವರ ಹಿರಿತನವನ್ನು ಗಮನದಲ್ಲಿಟ್ಟುಕೊಂಡು ಅವರನ್ನು ಸ್ವೀಕರಿಸುತ್ತಾರೆ ಎಂದು ಹೇಳಿದ್ದರು. ಆದರೆ ಕರ್ನಾಟಕ ವಿಷಯದ ಬಗ್ಗೆ ಹೈಕಮಾಂಡ್ ಯಾವುದೇ ನಿರ್ಧಾರ ತೆಗೆದುಕೊಂಡಿಲ್ಲ ಎಂದು ಖರ್ಗೆ ಸ್ಪಷ್ಟಪಡಿಸಿದ್ದಾರೆ. "ಸದ್ಯಕ್ಕೆ ಮುಖ್ಯಮಂತ್ರಿ ಇದ್ದಾರೆ ಮತ್ತು ಅವರನ್ನು ಬದಲಾಯಿಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದು ಖರ್ಗೆ ಕಡ್ಡಿಮುರಿದಂತೆ ಹೇಳಿದ್ದಾರೆ. ನಮ್ಮ ಪಕ್ಷದಲ್ಲಿ, ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಮತ್ತು ಇತರರೊಂದಿಗೆ ಎಐಸಿಸಿ ಅಧ್ಯಕ್ಷರು ಸರ್ವೋಚ್ಚ ಅಧಿಕಾರ ಹೊಂದಿದ್ದಾರೆ. ಹೈಕಮಾಂಡ್ ಯಾವುದೇ ನಿರ್ಧಾರ ತೆಗದಕೊಂಡರು ನಾವು ಗೌರವ ನೀಡುವುದಲ್ಲದೆ ಆದೇಶವನ್ನು ಸ್ವೀಕರಿಸುತ್ತೇವೆ" ಎಂದು ಪರಮೇಶ್ವರ ಶುಕ್ರವಾರ ಸುದ್ದಿಗಾರರಿಗೆ ತಿಳಿಸಿದರು,

"ಖರ್ಗೆ, ಸೋನಿಯಾ ಮತ್ತು ರಾಹುಲ್ ಅವರ ನಿರ್ಧಾರವು ನಮಗೆ 'ಪ್ರಸಾದ' (ಪವಿತ್ರ ಕಾಣಿಕೆ) ಇದ್ದಂತೆ, ಅದನ್ನು ನಾವು ಸ್ವೀಕರಿಸುತ್ತೇವೆ" ಎಂದು ಹೇಳುವ ಮೂಲಕ ಡಿಸಿಎಂ ಡಿಕೆ ಶಿವಕುಮಾರ್ ಕಾಂಗ್ರೆಸ್ ಹೈಕಮಾಂಡ್ ಗೆ ತಮ್ಮ ಅಚಲ ನಿಷ್ಠೆಯನ್ನು ಪ್ರದರ್ಶಿಸಿದ್ದಾರೆ. ಒಬ್ಬ ಕಾಂಗ್ರೆಸ್ಸಿಗನಾಗಿ, ನಾನು ಪಕ್ಷಕ್ಕೆ ತುಂಬಾ ನಿಷ್ಠನಾಗಿದ್ದೇನೆ. ನಮ್ಮ ಪಕ್ಷದ ನಾಯಕರ ಮಾತುಗಳು ಬಹಳ ಮುಖ್ಯ. ನಾವು ಪಕ್ಷದ ನಿರ್ದೇಶನಗಳನ್ನು ಪಾಲಿಸುತ್ತೇವೆ" ಎಂದು ಅವರು ಸುದ್ದಿಗಾರರಿಗೆ ತಿಳಿಸಿದರು.

## ಶ್ರೀ ದ್ಯಾಮಾಂಭೀಕ ದೇವಿ ಮೂರ್ತಿ ಪ್ರತಿಷ್ಠಾಪನೆ ಮತ್ತು ಶಿಲಾ ಮಂಟಪ ಲೋಕಾರ್ಪಣೆ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

ಕನಕಗಿರಿ ತಾಲೂಕಿನ ಗೌರಿಪುರ ಗ್ರಾಮದ ಶ್ರೀ ದ್ಯಾಮಾಂಭೀಕ ದೇವಿ ಮೂರ್ತಿ ಪ್ರತಿಷ್ಠಾಪನೆ ಮತ್ತು ಶಿಲಾ ಮಂಟಪ



ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಷ.ಬ್ರ.ಶ್ರೀ 108 ಕರಿಬಸವ ಶಿವಾಚಾರ್ಯ ಮಹಾಸ್ವಾಮಿಗಳು ಮದ್ದಾನೇಶ್ವರಮಠ ಕುಷ್ಟಗಿ ಇವರಿಗೆ ಊರಿನ ಗ್ರಾಮಸ್ಥರು ಸನ್ಮಾನಿಸಿದರು.

# ಜಿಲ್ಲಾ ಮಟ್ಟದ ವಿಶ್ವ ಮಲೇರಿಯಾ ದಿನ



ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಜಿಲ್ಲೆಯಲ್ಲಿ ಕಳೆದ ಒಂದು ದಶಕದಿಂದ ಮಲೇರಿಯಾ ಪ್ರಕರಣಗಳನ್ನು ಗಣನೀಯವಾಗಿ ಕಡಿಮೆಗೊಳಿಸಿದ ಸಾರ್ಥಕತೆ ಹಿನ್ನಲೆ ಜಿಲ್ಲಾ ಮಟ್ಟದ "ವಿಶ್ವ ಮಲೇರಿಯಾ ದಿನ" ವನ್ನು ಈಚನಾಳ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ: ಸುರೇಂದ್ರ ಬಾಬು ಜ್ಯೋತಿ ಬೆಳಗಿಸುವುದರ ಮೂಲಕ ಚಾಲನೆ ನೀಡಿ ನಂತರ ಮಾತನಾಡಿದ ಅವರು.

ಮುಂದಿನ ದಿನಗಳಲ್ಲಿ ಲಿಂಗಸಗೂರ ತಾಲೂಕಿನಲ್ಲಿ ಮಲೇರಿಯಾ ಪ್ರಕರಣಗಳನ್ನು ಶೂನ್ಯ ಕ್ಕೆ ತರಲು ಎಲ್ಲ ಮುಂಜಾಗ್ರತ ಕ್ರಮ ವಹಿಸಲು ಸಿಬ್ಬಂದಿ ಗಳಿಗೆ ಸೂಚಿಸಿದರು . ಇದರ ಜೊತೆಗೆ ಸಾರ್ವಜನಿಕರ ಸಹಕಾರ ಸಹಯೋಗ ಕೋರಿದರು. ನಂತರ ಗಣನೀಯ ಸೇವೆ ಸಲ್ಲಿಸಿದ ಆರೋಗ್ಯ ಕೇಂದ್ರದ ಸಿಬ್ಬಂದಿಗಳಿಗೆ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಡಾ: ಗಣೇಶ. ಕೆ. ಜಿಲ್ಲಾ ಮಲೇರಿಯಾ ನಿರ್ಮೂಲನಾಧಿಕಾರಿ, ತಾಲೂಕಾ ಆರೋಗ್ಯಾಧಿಕಾರಿ ಡಾ: ಅಮರೇಶ್ ಪಾಟೀಲ್. ವೈದ್ಯಾಧಿಕಾರಿ ಡಾ: ಹನ್ಮಂತರಾಯ ತಳ್ಳಳ್ಳಿ. ಡಾ: ರಾಜೇಶ್ವರಿ.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ. ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ. ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶರಣಬಸವ. ಬಸವರಾಜ. ಅಶೋಕ . ಪ್ರಯೋಗ ಶಾಲಾ ಅಧಿಕಾರಿ ಅಡಿವೆಪ್ಪ . ಸಾಂಕ್ರಾಮಿಕ ರೋಗ ತಜ್ಞ ಅಶೋಕ ಮಡ್ಡಿಕರ. ಫಾರ್ಸಿ ಅಧಿಕಾರಿ ಮಹ್ಮದ ಜುಬೇರ್ ಈಚನಾಳ ಆರೋಗ್ಯ ಕೇಂದ್ರದ ಅಧಿಕಾರಿಗಳು, ಸಿಬ್ಬಂದಿಯರು ಗ್ರಾಮದ ಹಿರಿಯರು, ಮುಖಂಡರು ಉಪಸ್ಥಿತರಿದ್ದರು.

## ಜಾಲಹಳ್ಳಿ ಅಪಘಾತಕ್ಕೆ ಆಹ್ವಾನ ನೀಡುತ್ತಿರುವ ತೆರೆದ ಗುಂಡಿ

ನೈಜ್ಯ ದೆಸೆ ನ್ಯೂಸ್

**ಜಾಲಹಳ್ಳಿ: ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರಾಜ್ಯ ಹೆದ್ದಾರಿಗೆ ಸಂಪರ್ಕ ಹೊಂದಿರುವ ಮುದುಗೋಟ ಕಡೆಗೆ ಸಾಗುವ ರಸ್ತೆಯ ಚರಂಡಿಯ ಮೇಲ್ಭಾಗದಲ್ಲಿ ದೊಡ್ಡ ಗುಂಡಿ ತೆರೆಯಲ್ಪಟ್ಟಿದ್ದು, ಸಾರ್ವಜನಿಕರ ಜೀವಕ್ಕೆ ಗಂಭೀರ ಅಪಾಯಕಾರಿಯಾಗಿ ಪರಿಣಮಿಸಿದೆ.**

ಈ ರಸ್ತೆಯಲ್ಲಿ ದಿನನಿತ್ಯ ದ್ವಿಚಕ್ರ ವಾಹನಗಳು ಹಾಗೂ ಇತರೆ ವಾಹನಗಳ ಸಂಚಾರ ಹೆಚ್ಚಿರುವುದರಿಂದ, ಯಾವುದೇ ಕ್ಷಣದಲ್ಲಿ ಅಪಘಾತ ಸಂಭವಿಸುವ ಭೀತಿ ಉಂಟಾಗಿದೆ. ವಿಶೇಷವಾಗಿ ರಾತ್ರಿ ಸಮಯದಲ್ಲಿ ಈ ಗುಂಡಿ ಸ್ಪಷ್ಟವಾಗಿ ಕಾಣಿಸದ ಕಾರಣ ಅಪಾಯ ಮತ್ತಷ್ಟು ಹೆಚ್ಚಾಗಿದೆ.



ಈ ಸಮಸ್ಯೆಯನ್ನು ಕುರಿತು ಜಾಲಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಮೌಖಿಕವಾಗಿ ತಿಳಿಸಿದರೂ, ಇದುವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲವೆಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ತಕ್ಷಣವೇ ಸಂಬಂಧಿಸಿದ ಅಧಿಕಾರಿಗಳು ಎಚ್ಚೆತ್ತುಕೊಂಡು, ಈ ಗುಂಡಿಯನ್ನು ಮುಚ್ಚಿ ರಸ್ತೆ ಸರಿಪಡಿಸುವಂತೆ ಮುದುಗೋಟ ಗ್ರಾಮದ ಯುವ ಮುಖಂಡರಾದ ಅಪ್ಪು ಪಾಟೀಲ್ ಹಾಗೂ ಗೋವಿಂದರಾಜ ನಾಯಕರು ಆಗ್ರಹಿಸಿದ್ದಾರೆ.

## ರಾಯಚೂರು ಮಹಾನಗರ ಪಾಲಿಕೆಯಿಂದ ಸಹಾಯ ಧನಕ್ಕೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ಮಹಾನಗರ ಪಾಲಿಕೆ ವತಿಯಿಂದ 2026–27ನೇ ಸಾಲಿನ ಎಸ್.ಎಫ್.ಸಿ ಇತರೆ ಹಿಂದುಳಿದ ಕಲ್ಯಾಣ ಕಾರ್ಯಕ್ರಮಗಳಲ್ಲಿ ಪಾಲಿಕೆ ವ್ಯಾಪ್ತಿಗೆ ಬರುವ ಅರ್ಹ ಫಲಾನುಭವಿಗಳಿಂದ ಸಹಾಯ ಧನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.**

ಇತರೆ ಹಿಂದುಳಿದ ಜನಾಂಗದ ಎಂ.ಎ/ ಎಂ.ಎಸ್.ಸಿ/ ಎಂ.ಕಂ/ ಎಂ.ಎಸ್.ಡಬ್ಲ್ಯೂ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗ ಸಹಾಯ ಧನಕ್ಕೆ ನಿಗದಿತ ನಮೂನೆಯಲ್ಲಿ ಅರ್ಜಿ, ಭಾವಚಿತ್ರ-1, ಹಿಂದಿನ ವರ್ಷದ ಅಂಕಪಟ್ಟಿ, ಆದಾಯನ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರ, ಚಾಲ್ತಿಯಲ್ಲಿರುವ ಆದಾಯ ಪ್ರಮಾಣ ಪತ್ರ, ಪ್ರವೇಶ ರಶೀದಿ ಹಾಗೂ ಬ್ಯಾಂಕ್ ಪಾಸ್ ಬುಕ್‌ನೊಂದಿಗೆ ದಿನಾಂಕ: 08.05.2026ರ ಸಂಜೆ 05ಗಂಟೆ ಒಳಗಾಗಿ ಸಲ್ಲಿಸಬಹುದಾಗಿದೆ. ಅವಧಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಸರಿಯಾದ ದಾಖಲಾತಿಗಳು ಸಲ್ಲಿಸದೆ ಇದ್ದ ಪಕ್ಷದಲ್ಲಿ ತಮಗ ಯಾವುದೇ ಹಿಂಬರಹ ಕಳುಹಿಸದೆ ನೇರವಾಗಿ ವಿಭಾಗದ ಸಿಬ್ಬಂದಿಯವರು ತಿರಸ್ಕೃತ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ನೋಟಿಸ್ ಬೊರ್ಡ್ ನೋಡಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಒಡಿಶಾದ ಜೀತು ಮುಂಡಾ ಪ್ರಕರಣ ಅಧಿಕಾರಿಗಳನ್ನು ವಜಾಗೊಳಿಸಲು ಸಿಪಿಐಎಂಎಲ್ಲಿಬರೇಶನ್ ಆಗ್ರಹ!

ನೈಜ್ಯ ದೆಸೆ ನ್ಯೂಸ್

**ಒಡಿಶಾದ ಬುಡಕಟ್ಟು ಸಮುದಾಯದ ಜೀತು ಮುಂಡಾ ಅವರ ಮೇಲೆ ಸರ್ಕಾರಿ ಬ್ಯಾಂಕ್ ಅಧಿಕಾರಿಗಳ ಅಮಾನವೀಯ ವರ್ತನೆ ಖಂಡಿಸಿ, ಈ ಪ್ರಕರಣವನ್ನು ನ್ಯಾಯಾಂಗ ತನಿಖೆಗೊಳಪಡಿಸಿ, ತಪ್ಪಿತಸ್ಥ ಬ್ಯಾಂಕ್ ಅಧಿಕಾರಿಗಳನ್ನು ಹುದ್ದೆಯಿಂದ ವಜಾಗೊಳಿಸುವಂತೆ ಆಗ್ರಹಿಸಿ, ತಹಸೀಲ್ದಾರ್ ಅವರ ಮೂಲಕ ಶನಿವಾರ ಸಿಪಿಐ(ಎಂಎಲ್) ಲಿಬರೇಶನ್ ಪಕ್ಷದ ವತಿಯಿಂದ ರಾಷ್ಟ್ರಪತಿಗಳಿಗೆ ಮನವಿ ರವಾನಿಸಲಾಯಿತು.**

ಮೃತ ಪಡುವುದಕ್ಕೂ ಮುನ್ನ ಸಹೋದರಿ ಕರ್ಲಾ ಮುಂಡಾ ಅವರು ಒಡಿಶಾ ಗ್ರಾಮೀಣ ಬ್ಯಾಂಕ್‌ನಲ್ಲಿ ಠೇವಣಿ ಇಟ್ಟಿದ್ದ 20 ಸಾವಿರ ರೂಪಾಯಿಯನ್ನು ವಾಪಸ್ ನೀಡುವಂತೆ ಜೀತು ಮುಂಡಾ ಅವರು ಹತ್ತಾರು ಬಾರಿ ಬ್ಯಾಂಕ್ ಅಲೆದಾಡಿದರೂ ಬ್ಯಾಂಕ್ ಅಧಿಕಾರಿಗಳು ದಾಖಲೆ ನೀಡುವಂತೆ ಸತಾಯಿಸಿದ್ದಾರೆ. ರೋಸಿಹೋದ ಜೀತು ಮುಂಡಾ ಅವರು ಸಮಾದಿ




ಅಗೆದು ಕೊಳೆತ ಸ್ಥಿತಿಯಲ್ಲಿದ್ದ ಸೋದರಿಯ ಶವವನ್ನು ಚೀಲದಲ್ಲಿ ಕಟ್ಟಿಕೊಂಡು ಬ್ಯಾಂಕ್‌ಗೆ ಬಂದಿದ್ದಾರೆ. ಈ ಘಟನೆಗೆ ಬ್ಯಾಂಕ್ ಅಧಿಕಾರಿಗಳ ಅಮಾನವೀಯ ವರ್ತನೆ ಕಾರಣವಾಗಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಸಿಪಿಐ(ಎಂಎಲ್) ಲಿಬರೇಶನ್ ತಾಲ್ಲೂಕು ಕಾರ್ಯದರ್ಶಿ ಬಸವರಾಜ ಬೆಳಗುರ್ಕಿ ಮಾತನಾಡಿ, ಬ್ಯಾಂಕ್‌ಗಳಲ್ಲಿ ಬಡವರು, ಆದಿವಾಸಿಗಳು, ಶೋಷಿತ ಸಮುದಾಯಕ್ಕೆ ಸಾಲ ನೀಡುವುದಿರಲಿ, ಠೇವಣಿಯಿಟ್ಟ ಹಣವನ್ನು ವಾಪಸ್ ನೀಡಲು ಸತಾಯಿಸಲಾಗುತ್ತಿದೆ. ಆದರೆ ಸಾವಿರಾರು ಕೋಟಿ ರೂಪಾಯಿ ಹಣವನ್ನು ಉದ್ಯಮಿಗಳು, ಬಂಡವಾಳಿಗರು ಹಾಗೂ ಸಾಲ ಮುಳುಗಿಸುವವರಿಗೆ ನೀಡುವ ಮೂಲಕ ಆರ್ಥಿಕ ತಾರತಮ್ಯ ಮಾಡುತ್ತಿವೆ. ಕಳೆದ 10 ಆರ್ಥಿಕ ವರ್ಷಗಳಲ್ಲಿ ಬ್ಯಾಂಕ್‌ಗಳು ರೈಟ್ ಆಫ್ ಮಾಡಿರುವ ವಸೂಲಾಗದ ಸಾಲದ (ಎನ್‌ಪಿಎ) ಒಟ್ಟು ಮೊತ್ತವು ರೂ.16.35 ಲಕ್ಷ ಕೋಟಿ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರೇ ಕಳೆದ ಮಾರ್ಚ್, 2025ರಲ್ಲಿ ಸುದ್ದಿಮಾಧ್ಯಮಗಳಿಗೆ ತಿಳಿಸಿದ್ದರು.

ದೇಶದಲ್ಲಿ ದಲಿತ, ದಮನಿತ, ಇನ್ನಿತರೆ ಹಿಂದುಳಿದ ಸಮುದಾಯಗಳಿಗೆ ಸಾಲ ಸೌಲಭ್ಯ ಒದಗಿಸುವಲ್ಲಿ ಹತ್ತಾರು ನಿರ್ಬಂಧಗಳನ್ನು ವಿಧಿಸುವ ಮೂಲಕ ದೇಶದಲ್ಲಿ ಆರ್ಥಿಕ ತಾರತಮ್ಯ ಮಾಡಲಾಗುತ್ತಿದೆ. ಆ ಮೂಲಕ ಸ್ವಾತಂತ್ರ್ಯ ಇಂದಿಗೂ ಆರ್ಥಿಕವಾಗಿ ಶೋಷಿಸುತ್ತಾ ಬರಲಾಗುತ್ತಿದೆ. ಇದಕ್ಕೆ ಜೀತು ಮುಂಡಾ ಪ್ರಕರಣವೇ ಜ್ವಲಂತ ಸಾಕ್ಷಿ ಎಂದರು. ಒಡಿಶಾದ ಕಿಯೋಂಜಾರ್ ಜಿಲ್ಲೆಯ ಪಟಣಾ ತಾಲ್ಲೂಕಿನ ದೈನಾಳಿ ಬುಡಕಟ್ಟು ಗ್ರಾಮದ ಅನಕ್ಷರಸ್ಥ ಜೀತು ಮುಂಡಾ ಅವರ ಪ್ರಕರಣವನ್ನು ಹೈಕೋರ್ಟ್ ಮುಖ್ಯ ನ್ಯಾಯಾಧೀಶರ ಮೇಲ್ವಿಚಾರಣೆಯಲ್ಲಿ ನ್ಯಾಯಾಂಗ ತನಿಖೆಗೆ ಒಳಪಡಿಸಿ, ತಪ್ಪಿತಸ್ಥ ಬ್ಯಾಂಕ್ ಅಧಿಕಾರಿಗಳನ್ನು ವಜಾಗೊಳಿಸಬೇಕು,

ನೈತಿಕ ಹೊಣೆಹೊತ್ತು ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಕೂಡಲೇ ರಾಜೀನಾಮೆ ನೀಡಬೇಕು ಹಾಗೂ ಇಂತಹ ಘಟನೆಗಳು ಮರುಕಳಿಸದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಎಂಬ ಹಕ್ಕೊತ್ತಾಯಗಳ ಮನವಿಪತ್ರವನ್ನು ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ: ಪಕ್ಷದ ಮುಖಂಡರಾದ ರಾಘವೇಂದ್ರ ಉಪ್ಪಳ, ಭಗತ್‌ಸಿಂಗ್ ಆಟೋ ಚಾಲಕರ ಸಂಘದ ಅಧ್ಯಕ್ಷ ಬಸವರಾಜ ಕೊಂಡೆ, ತುಸಳಪ್ಪ ದಡೇಸುಗೂರು, ಹನುಮಂತ ಟೈಲರ್, ರಾಮಣ್ಣ, ಮಂಜುನಾಥ ಸೇರಿದಂತೆ ಇನ್ನಿತರರಿದ್ದರು.

## ಸಾಹಿತ್ಯ ಸಿಂಚನ

ಸ್ನೇಹಿತ
ಸಂತಸದ ಕ್ಷಣದಲ್ಲಿ ಜೊತೆಗಿರುವವನು ಹಲವರು,
ದುಃಖದ ಕ್ಷಣದಲ್ಲಿ ಕೈ ಹಿಡಿಯುವವನೇ ಸ್ನೇಹಿತನು.

ನಗುವಿನ ಹಿಂದೆ ಮರೆವ ನೋವನ್ನು ಅರಿಯುವವನು,
ಮಾತಿಲ್ಲದೇ ಮನಸ್ಸು ಓದುವವನೇ ಸ್ನೇಹಿತನು.

ಬಾಳ ದಾರಿಯಲ್ಲಿ ಬೆಳಕಾಗಿ ನಿಲ್ಲುವವನು,
ತಪ್ಪಾದಾಗ ಸರಿ ದಾರಿಗೆ ತರುವವನು.

ಸ್ವಾರ್ಥವಿಲ್ಲದ ಪ್ರೀತಿ ನೀಡುವವನು,
ಜೀವನವೆಂಬ ಪುಸ್ತಕದ ಸುಂದರ ಅಧ್ಯಾಯ ಸ್ನೇಹಿತನು.

ಸಂಪತ್ತಿಗಿಂತ ಮೌಲ್ಯವಾದ ಸಂಬಂಧ,
ಹೃದಯದಲ್ಲಿ ಸದಾ ಉಳಿಯುವ ಬಂಧ ಸ್ನೇಹಿತನು.

ನೀನು ಇದ್ದರೆ ಬದುಕು ಹಬ್ಬದಂತೆ,
ನೀ ಇಲ್ಲದರೆ ಹೃದಯ ಖಾಲಿಯಂತೆ?

ರಮೇಶ್

## ವಿದ್ಯುತ್ ಕಂಬ ಸ್ಥಳಾಂತರ: ಮೇ.03ರಂದು ವಿದ್ಯುತ್ ವ್ಯತ್ಯಯ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 1ರ ವ್ಯಾಪ್ತಿಗೆ ಬರುವ ಟಿಸಿ–39, ಟಿಸಿ–39ಎ, ಟಿಸಿ–39/1 ಹಾಗೂ ಎಮ್ಎಸ್‌ಬಿಯಲ್ಲಿ ಬಂದೇ ನವಾಜ್ ಕಾಲೋನಿಯ ಶ್ರೀ ಮಹಮದ್ ಅಲಿ ಖಾನ್ ಅವರ ಮನೆ ಸಂಖ್ಯೆ: 1–11–40/60 ಮನೆಯ ಹತ್ತಿರ ವಿದ್ಯುತ್ ಕಂಬ ಸ್ಥಳಾಂತರಿಸುವಂತೆ ಕೋರಲಾಗಿದ್ದು,**




ಈ ಪ್ರಯುಕ್ತ ಮೇ. 03ರ ಬೆಳಿಗ್ಗೆ 11ರಿಂದ ಮಧ್ಯಾಹ್ನ 2ವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ.04ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಮೇ.04ರ ಬೆಳಿಗ್ಗೆ 10ಗಂಟೆಯಿಂದ ಮಧ್ಯಾಹ್ನ 1ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ. ನೇರ ಸಂದರ್ಶನದಲ್ಲಿ ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.**

ಅರ್ಹತೆಗಳು: ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 28 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532–231684, 9916931616, 9008211750ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮತ ಎಣಿಕೆ ಕೇಂದ್ರ ಸಿಬ್ಬಂದಿ ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿ ವಜಾ

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಬರುವ ಸೋಮವಾರ ಮೇ 4 ರಂದು ಪಶ್ಚಿಮ ಬಂಗಾಳ ಸೇರಿದಂತೆ ಪಂಚ ರಾಜ್ಯಗಳ ವಿಧಾನಸಭಾ ಚುನಾವಣೆ ಮತ ಎಣಿಕೆಗೆ ಕೇಂದ್ರ ಸರ್ಕಾರದ ಸಿಬ್ಬಂದಿಗಳನ್ನು ನಿಯೋಜಿಸುವುದನ್ನು ಪ್ರಶ್ನಿಸಿ, ಸಲ್ಲಿಸಲಾಗಿದ್ದ ಅರ್ಜಿಯನ್ನು ವಜಾ ಮಾಡಿರುವ ಸುಪ್ರೀಂಕೋಟ್ ಈ ಬಗ್ಗೆ ಆದೇಶ ನೀಡಲು ನಿರಾಕರಿಸಿರುವುದು. ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರಿಗೆ ಹಿನ್ನೆಡೆಯಾದಂತಾಗಿದೆ.**

ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಮತ ಎಣಿಕೆಯಲ್ಲಿ ಕೇಂದ್ರ ಸರ್ಕಾರ ಸಿಬ್ಬಂದಿಗಳನ್ನು ಮಾತ್ರ ಬಳಸುವ ಕೇಂದ್ರ ಚುನಾವಣಾ ಆಯೋಗದ ತೀರ್ಮಾನವನ್ನು ಪ್ರಶ್ನಿಸಿ, ಪಶ್ಚಿಮ ಬಂಗಾಳದ



ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಸಲ್ಲಿಸಿದ್ದ ಅರ್ಜಿಯ ತುರ್ತು ವಿಚಾರಣೆಯನ್ನು ಇಂದು ನಡೆಸಿದ ಸುಪ್ರೀಂಕೋರ್ಟ್ ಕೇಂದ್ರ ಚುನಾವಣಾ ಆಯೋಗದ ನಿರ್ಧಾರ ಕಾನೂನಿಗೆ ವಿರುದ್ಧವಲ್ಲ ಎಂದು ಹೇಳಿ ಈ ಬಗ್ಗೆ ಯಾವುದೇ ಆದೇಶವನ್ನು ಹೊರಡಿಸುವ ಅಗತ್ಯವಿಲ್ಲ ಎಂದು ಹೇಳಿ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಸಲ್ಲಿಸಿದ್ದ ಅರ್ಜಿಯನ್ನು ವಜಾ ಮಾಡಿತು.

ಕೇಂದ್ರ ಚುನಾವಣಾ ಆಯೋಗ ಪಶ್ಚಿಮ ಬಂಗಾಳದ ಮತ ಎಣಿಕೆಗೆ ಕೇಂದ್ರ ಸರ್ಕಾರದ ಸಿಬ್ಬಂದಿಗಳನ್ನು ಮಾತ್ರ ನಿಯೋಜಿಸುವ ತೀರ್ಮಾನವನ್ನು ಬೆಂಬಲಿಸಿದ ಸುಪ್ರೀಂಕೋರ್ಟ್ ಈ ಸಂಬಂಧ ಕೇಂದ್ರ ಚುನಾವಣಾ ಆಯೋಗ ಹೊರಡಿಸಿರುವ ಸುತ್ತೋಲೆ ತಪ್ಪಿನಿಂದ ಕೂಡಿಲ್ಲ ಎಂದು ಹೇಳಿ ಮಮತಾ ಬ್ಯಾನರ್ಜಿಯವರ ಅರ್ಜಿಯನ್ನು ವಜಾ ಮಾಡಿತು. ಇದೇ ಸಂದರ್ಭದಲ್ಲಿ ಕೇಂದ್ರ ಚುನಾವಣಾ ಆಯೋಗ ಏ. 13 ರಂದು ಹೊರಡಿಸಿರುವ ಸುತ್ತೋಲೆಯನ್ನು ಕಟ್ಟುನಿಟ್ಟಾಗಿ ಜಾರಿ ಮಾಡುತ್ತೇವೆ. ಮತ ಎಣಿಕೆಯ ಕೇಂದ್ರದ ರಿಟರ್ನಿಂಗ್ ಆಫೀಸರ್ ಆಗುವ ರಾಜ್ಯ ಸರ್ಕಾರದ ಅಧಿಕಾರಿಯೇ ಎಲ್ಲದರ ಸಂಪೂರ್ಣ ಉಸ್ತುವಾರಿಯನ್ನು ಹೊಂದಿರುತ್ತಾರೆ ಎಂದು ನ್ಯಾಯಾಲಯಕ್ಕೆ ತಿಳಿಸಿ ಈ ಬಗ್ಗೆ ಟಿಎಂಸಿ ಎತ್ತಿರುವ ವಿಚಾರ ಸರಿಯಲ್ಲ ಎಂದು ಹೇಳಿತು.

ಸುಪ್ರೀಂಕೋರ್ಟ್‌ನ ಈ ನಿರ್ಧಾರದಿಂದ ಮಮತಾ ಬ್ಯಾನರ್ಜಿಗೆ ಹಿನ್ನೆಡೆಯಾಗಿದೆ. ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆ ಮತ ಎಣಿಕೆ ಮೇ 4 ರಂದು ನಡೆಯಲಿದ್ದು, ಈ ಮತ ಎಣಿಕೆಗೆ ಮೇಲ್ವಿಚಾರಕರನ್ನಾಗಿ ಕೇಂದ್ರ ಸರ್ಕಾರಿ ನೌಕರರನ್ನು ಮಾತ್ರ ನಿಯೋಜಿಸುವ ಸಂಬಂಧ ಕೇಂದ್ರ ಆಯೋಗ ಸುತ್ತೋಲೆ ಹೊರಡಿಸಿತ್ತು. ಆಯೋಗದ ಈ ನಿರ್ಧಾರವನ್ನು ಪ್ರಶ್ನಿಸಿ, ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಸುಪ್ರೀಂಕೋರ್ಟ್‌ನಲ್ಲಿ ನಿನ್ನೆ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯನ್ನು ಗಮನಿಸಿದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಇಂದು ಅರ್ಜಿಯ ತುರ್ತು ವಿಚಾರಣೆಗೆ ನಿರ್ದೇಶನ ನೀಡಿದ್ದರು.

# ನರೇಗಾ ಕೆಲಸದ ಸ್ಥಳದಲ್ಲಿ ವಿಶ್ವ ಕಾರ್ಮಿಕರ ದಿನಾಚರಣೆ




ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ: ಇಲ್ಲಿಗೆ ಸಮೀಪದ ಬಾಗೂರು ಗ್ರಾಮದ ಹೊರವಲಯದಲ್ಲಿ ನಡೆಯುತ್ತಿದ್ದ ನರೇಗಾ (ಉದ್ಯೋಗ ಖಾತ್ರಿ) ಕೆಲಸದ ಸ್ಥಳದಲ್ಲಿ ಕೃಷಿ ಮತ್ತು ಗ್ರಾಮೀಣ ಕಾರ್ಮಿಕರ ಸಂಘಟನೆಯ**



**ವತಿಯಿಂದ ವಿಶ್ವ ಕಾರ್ಮಿಕರ ದಿನವನ್ನು ಆಚರಿಸಲಾಯಿತು.**

ಕಾರ್ಯಕ್ರಮದಲ್ಲಿ ಹಿರಿಯ ಕೂಲಿಕಾರರಿಂದ ಕೇಕ್ ಕತ್ತರಿಸಿ, ಒಬ್ಬರಿಗೊಬ್ಬರು ಸಿಹಿ ತಿನಿಸಿ ಸಂಭ್ರಮಿಸಿದರು. ಬಳಿಕ ಕೃಷಿ ಕೂಲಿಕಾರರ ಸಂಘಟನೆಯ ಜಿಲ್ಲಾ ಕಾರ್ಯದರ್ಶಿ ಸಂಗಮೇಶ ಮೂಲಿಮನಿ ಮಾತನಾಡಿ, ದೇಶದ ಅಭಿವೃದ್ಧಿಯಲ್ಲಿ ಕಾರ್ಮಿಕ ವರ್ಗದ ಶ್ರಮ ಅಮೂಲ್ಯವಾಗಿದೆ ಎಂದು ಹೇಳಿದರು. ಅವರು ಮುಂದುವರಿಸಿ, ಕಾರ್ಮಿಕರನ್ನು ಗೌರವದಿಂದ ದುಡಿಸಿಕೊಳ್ಳಬೇಕು ದುಡಿಮೆಗೆ ತಕ್ಕ ಕೂಲಿ ನೀಡಬೇಕು ಕೆಲಸದ ಸ್ಥಳಗಳಲ್ಲಿ ಸುರಕ್ಷತಾ ಕ್ರಮಗಳನ್ನು ಕಡ್ಡಾಯವಾಗಿ ಅನುಸರಿಸಬೇಕು ದೌರ್ಜನ್ಯ ಮತ್ತು ದಬ್ಬಾಳಿಕೆ ವಿರುದ್ಧ ಕಾರ್ಮಿಕರು ಒಗ್ಗೂಡಬೇಕು ಎಂದು ಕರೆ ನೀಡಿದರು.

ಜೊತೆಗೆ ಉದ್ಯೋಗ ಖಾತ್ರಿ ಯೋಜನೆಯ ಕೆಲಸದ ಸ್ಥಳಗಳಲ್ಲಿ ಕುಡಿಯುವ ನೀರು ಮತ್ತು ನೆರಳಿನ ವ್ಯವಸ್ಥೆಯನ್ನು ಒದಗಿಸುವಂತೆ ಒತ್ತಾಯಿಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಬಿಎಫ್ಟಿ ರವಿಚಂದ್ರ ನಾಯಕ, ಕೃಷಿ ಕೂಲಿಕಾರರ ಸಂಘಟನೆಯ ತಾಲ್ಲೂಕು ಅಧ್ಯಕ್ಷ ಲಿಂಗಣ್ಣ ಮಕಾಶಿ, ಹೇರುಂಡಿ ಗ್ರಾಮ ಘಟಕ ಅಧ್ಯಕ್ಷ ಶಿವಣ್ಣ, ಕಾರ್ಯದರ್ಶಿ ದೇವಮ್ಮ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಮೇ.04ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಮೇ.04ರ ಬೆಳಿಗ್ಗೆ 10ಗಂಟೆಯಿಂದ ಮಧ್ಯಾಹ್ನ 1ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ. ನೇರ ಸಂದರ್ಶನದಲ್ಲಿ ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು**

ನೇರ ಸಂದರ್ಶನ

ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.


ಅರ್ಹತೆಗಳು: ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 28 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532–231684, 9916931616, 9008211750ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್.ಎಸ್.ಎಲ್.ಸಿ ಪಾಸಾದವರು ಪ್ಯಾರಾಮೆಡಿಕಲ್ ಕೋರ್ಸ್ ಮಾಡಬಹುದು :ಹೈಕೋರ್ಟ್

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: 2026–27 ನೇ ಶೈಕ್ಷಣಿಕ ವರ್ಷದಲ್ಲಿ ಎಸ್ ಎಸ್ ಎಲ್ ಸಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ಯಾರಾಮೆಡಿಕಲ್ ಸಂಸ್ಥೆಗಳಲ್ಲಿ ಕೆಲವು ಡಿಪ್ಲೋಮಾ ಕೋರ್ಸ್ ಗಳಿಗೆ ಪ್ರವೇಶ ಪಡೆಯಲು ಅವಕಾಶ ಕಲ್ಪಿಸಿ ಹೈಕೋರ್ಟ್ ಮಧ್ಯಂತರ ಆದೇಶ ನೀಡಿದೆ.**

ರಾಜ್ಯದಲ್ಲಿ ಸುಮಾರು 640 ಕಾಲೇಜುಗಳನ್ನು ಹೊಂದಿರುವ ಕರ್ನಾಟಕ ಅರವೈದ್ಯಕೀಯ ಸಂಸ್ಥೆಗಳ ನಿರ್ವಹಣಾ ಸಂಘ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಇ.ಎಸ್. ಇಂದಿರೇಶ್ ಇವರಿದ್ದ ನ್ಯಾಯಪೀಠ ಈ ಮಧ್ಯಂತರ ಆದೇಶ ನೀಡಿದೆ. 2026–27ರ ಶೈಕ್ಷಣಿಕ ವರ್ಷದಲ್ಲಿ ಎಸ್ ಎಸ್ ಎಲ್ ಸಿ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಪ್ಯಾರ




ಮೆಡಿಕಲ್ ನ ಕೋರ್ಸ್ಗಳಾದ ಪ್ರಯೋಗಾಲಯ ತಂತ್ರಜ್ಞಾನ, ಅ ಪ್ಟೋಮೆಟ್ರಿ ತಂತ್ರಜ್ಞಾನ, ಡಿಪ್ಲೋಮಾ ಇನ್ ಹೆಲ್ತ್ ಇನ್ಸ್ಪೆಕ್ಟರ್ ಮತ್ತು ಇಮೇಜಿಂಗ್ ತಂತ್ರಜ್ಞಾನ ಸೇರಿದಂತೆ ವಿವಿಧ ಕೋರ್ಸ್ ಗಳಿಗೆ ಸೇರಿಸಿಕೊಳ್ಳಬಹುದು ಎಂದು ಕೋರ್ಟ್ ಆದೇಶಿಸಿದೆ ಇದಕ್ಕೂ ಮುನ್ನ ನಡೆದ ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ನ್ಯಾಷನಲ್ ಹೆಲ್ತ್ ಪ್ರೊಫೆಶನ್ ಅಲೈಡ್ ಆಕ್ಟ್ 2021 ರಲ್ಲಿ ಕಾಯ್ದೆ ಜಾರಿ ಮಾಡಿದ್ದು ಪ್ಯಾರಾಮೆಡಿಕಲ್ ಕೋರ್ಸ್ಗೆ ಪದವಿ ಪೂರ್ವ ಶಿಕ್ಷಣದಲ್ಲಿ ವಿಜ್ಞಾನ ವಿಭಾಗದಲ್ಲಿ ಅಧ್ಯಯನ ಮಾಡಿರಬೇಕು ಎಂದು ತಿಳಿಸಿತ್ತು. 2021 ರಲ್ಲಿ ಕಾಯ್ದೆ ಜಾರಿ ಮಾಡಿದ್ದರೂ ಅದನ್ನು ಹಂತ ಹಂತವಾಗಿ ಅನುಷ್ಠಾನ ಮಾಡಲಾಗುತ್ತಿತ್ತು ಈವರೆಗೂ ಪಠ್ಯಕ್ರಮದಲ್ಲಿ ಬದಲಾವಣೆ ಮಾಡಲಾಗುತ್ತಿತ್ತು ಪ್ರಸ್ತುತ ವರ್ಷದಿಂದ ಪ್ಯಾರಾ ಮೆಡಿಕಲ್ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಉತ್ತೀರ್ಣರಾಗಿರಬೇಕು ಎಂದು ತಿಳಿಸಲಾಗಿದೆ . ಆದ್ದರಿಂದ ಈ ಹಿಂದೆ ಇದ್ದ ನಿಯಮಗಳಂತೆ ಎಸ್. ಎಸ್.ಎಲ್.ಸಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೂ ಅವಕಾಶ ನೀಡಬೇಕು ಎಂದು ಕೋರಿದ್ದರು.

# ವಿಶ್ವ ಮಲೇರಿಯಾ ದಿನಾಚರಣೆ ಸೊಳ್ಳೆ ಪರದೆ ಕಡ್ಡಾಯವಾಗಿ ಬಳಸಿ, ಮಲೇರಿಯಾ ರೋಗ ಹರಡದಂತೆ ನೋಡಿಕೊಳ್ಳಿ: ಡಾ.ಸುರೇಂದ್ರ ಬಾಬು

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಸೋಂಕಿಗೆ ಒಳಪಡುವ ಅನಾಫಿಲಿಸ್ ಹೆಣ್ಣು ಸೊಳ್ಳೆಯಿಂದ ಮಲೇರಿಯಾ ರೋಗ ಹರಡುತ್ತದೆ. ಹಾಗಾಗಿ ಮಲಗುವಾಗ ಸೊಳ್ಳೆ ಪರದೆಗಳನ್ನು ಕಡ್ಡಾಯವಾಗಿ ಬಳಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಶ ಬಾಬು ಅವರು ಹೇಳಿದರು.**

ಮೇ.02ರ ಶನಿವಾರ ದಂದು ಜಿಲ್ಲೆಯ ಲಿಂಗಸುಗೂರು ತಾಲೂಕಿನ ಈಚನಾಳ ಪ್ರಾಥಮಿಕ ಅರೋಗ್ಯ ಕೇಂದ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಲಿಂಗಸುಗೂರು ಇವರ ಆಶ್ರಯದಲ್ಲಿ ಜಿಲ್ಲಾ ಮಟ್ಟದ ವಿಶ್ವ ಮಲೇರಿಯಾ ದಿನಾಚರಣೆ ಚಾಲನೆ ನೀಡಿ ಅವರು ಮಾತನಾಡಿದರು. ಮಲೇರಿಯಾ ರೋಗಕ್ಕೆ ತುತ್ತಾದ ವ್ಯಕ್ತಿಗೆ ಕಚ್ಚುವ ಸೊಳ್ಳೆಗಳು, ಆರೋಗ್ಯವಂತ ಮನುಷ್ಯನಿಗೆ ಕಚ್ಚಿದಾಗ ಮಲೇರಿಯಾ ರೋಗ ಹರಡುತ್ತದೆ. ಹಾಗಾಗಿ ಜ್ವರ



ಬಂದಾಗ ತಕ್ಷಣ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಹೋಗಿ ರಕ್ತ ಪರೀಕ್ಷೆ ಮಾಡಿಸಿಕೊಳ್ಳಬೇಕು.

ನೀರು ಸಂಗ್ರಹ ಪರಿಕರಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸಬೇಕು. ಯಾವುದೇ ರೋಗವನ್ನು ನಿಯಂತ್ರಣಕ್ಕೆ ತರಲು ಸಾರ್ವಜನಿಕರ ಸಹಕಾರ ಅಗತ್ಯವಾಗಿರುತ್ತದೆ. ಸಾರ್ವಜನಿಕರ ಸಹಕಾರವಿಲ್ಲದೇ ಯಾವುದೇ ಕಾರ್ಯಗಳು ಪರಿಪೂರ್ಣವಾಗುವುದಿಲ್ಲ ಎಂದರು. ಅನಾಫೀಲಿಸ್ ಹೆಣ್ಣು ಸೊಳ್ಳೆಯ ಕಚ್ಚುವಿಕೆಯಿಂದ ಹರಡುವ ಮಲೇರಿಯಾವನ್ನು ಜಿಲ್ಲೆಯಲ್ಲಿ ಕಳೆದ ಒಂದು ದಶಕದಲ್ಲಿ ಸೂಕ್ತ ಚಿಕಿತ್ಸೆ, ನಿಗಾವಣೆ, ಪರಿಣಾಮಕಾರಿಯಾಗಿ ಕೀಟನಾಶಕ ಸಿಂಪರಣೆಯಿಂದ ಗಣನೀಯವಾಗಿ ಕಡಿಮೆ ಮಾಡಲಾಗಿದ್ದು ಮುಂದಿನ ದಿನಗಳಲ್ಲಿ ಪ್ರಕರಣಗಳ ಸಂಖ್ಯೆಯನ್ನು ಶೂನ್ಯಕ್ಕೆ ಇಳಿಸುವ ದಿಶೆಯಲ್ಲಿ ಸಮರೋಪಾದಿಯಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ ದಶಕಗಳ ಹಿಂದೆ ಪ್ರತಿದಿನ ವರದಿಯಾಗುತ್ತಿದ್ದ ಮಲೇರಿಯಾ ಪ್ರಕರಣಗಳು ಇಲಾಖೆಯ ಎಲ್ಲ ಹಂತದ ಅಧಿಕಾರಿಗಳು ಸಿಬ್ಬಂದಿಯರ ಪರಿಶ್ರಮದಿಂದ ಹೆಚ್ಚು ಪ್ರಕರಣಗಳು ಕಂಡು ಬರುತ್ತಿದ್ದ ಈಚನಾಳ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಕೃಷ್ಣಾ ನದಿಯ ದ್ವೀಪ ಪ್ರದೇಶದ ಕೆಲವು ಹಳ್ಳಿಗಳಲ್ಲಿ ನಿರಂತರವಾಗಿ ನಿಗಾವಹಿಸಿ ನಿಯಂತ್ರಣ ಮಾಡಲಾಗಿದ್ದು, ವಲಸೆ ಜನವಸತಿ, ದೊಡ್ಡಿ, ಹಟ್ಟಿಗಳ ಜನರ ನಿಗಾವಹಿಸಿ ಜ್ವರ ಬಂದ ತಕ್ಷಣ ರಕ್ತಲೇಪನ ಹಾಗೂ ಖಚಿತ ಪಟ್ಟಲ್ಲಿ ಚಿಕಿತ್ಸೆ ಒದಗಿಸಲಾಗುತ್ತಿದೆ. ಕುಟುಂಬದ ಸದಸ್ಯರಲ್ಲಿ ಯಾರಿಗಾದರೂ ಜ್ವರ ಕಂಡುಬಂದಲ್ಲಿ ನಿರ್ಲಕ್ಷ್ಯ ಮಾಡದೆ ರಕ್ತಲೇಪನ ಪರೀಕ್ಷೆ ಮಾಡಿಸಬೇಕು. ಇದರಿಂದ ಮಲೇರಿಯಾ ಸೇರಿದಂತೆ ಸೋಂಕಿತ ಸೊಳ್ಳೆಗಳ ಕಚ್ಚುವಿಕೆಯಿಂದ ಹರಡುವ ರೋಗಗಳ ನಿಯಂತ್ರಣಕ್ಕೆ ಸಹಕಾರವಾಗುವುದು ಎಂದರು.

ಜಿಲ್ಲಾ ಸರ್ವೇಕ್ಷಣಾ ಮತ್ತು ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಗಣೇಶ್ ಕೆ. ಅವರು ಮಾತನಾಡಿ, ಮನೆಯ ಸುತ್ತಲಿನ ಜಾಗಗಳಲ್ಲಿ ಶಾಶ್ವತ ನೀರು ನಿಲ್ಲುವ ಸ್ಥಳಗಳಿದ್ದರೆ, ಮಣ್ಣು ಹಾಕಿ ಮುಚ್ಚಲು, ಮಲಗುವಾಗ ಇಲಾಖೆಯಿಂದ ಒದಗಿಸಿದ ಮೆಡಿಕೆಟೆಡ್ ಸೊಳ್ಳೆಪರದೆಗಳ ಬಳಕೆ, ಬೇರೆ ಊರಿನಿಂದ ಬಂದಾಗ ಜ್ವರ ಇದ್ದರೆ ತಕ್ಷಣ ಪರೀಕ್ಷೆ, ಮಾಡಿಸಲು ತಿಳಿಸಿದರಲ್ಲದೆ ಕೀಟ ನಾಶಕ ಸಿಂಪರಣೆಗೆ ಇಲಾಖೆಯ ತಂಡ ಮನೆಗಳಿಗೆ ಬಂದಾಗ ಜನತೆ ಸಂಪೂರ್ಣ ಸಹಕಾರ ನೀಡಲು ತಿಳಿಸಿದರು. ಇದೇ ಸಂದರ್ಭದಲ್ಲಿ ತಾಲೂಕಾ ಆರೋಗ್ಯಾಧಿಕಾರಿ ಡಾ.ಅಮರೇಶ ಪಾಟೀಲ್, ಆಡಳಿತ ವೈದ್ಯಾಧಿಕಾರಿ ಡಾ.ಹನಮಂತರಾಯ ತಳ್ಳಳ್ಳಿ, ವೈದ್ಯಾಧಿಕಾರಿ ಡಾ.ರಾಜೇಶ್ವರಿ ಮುಖಂಡರಾದ ಆದೇಪ್ಪ, ಪೀರಸಾಬ್,

ಬಸವರಾಜ್, ಹನುಮಂತ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಅಡಿವೆಪ್ಪ, ಶರಣಬಸವ ಪಾಟೀಲ್, ಬಸವರಾಜ್, ಆರೋಗ್ಯ ನಿರೀಕ್ಷಣಾಧಿಕಾರಿ ಶಿವಕುಮಾರ, ಅಮರೇಶ, ಜಗದೀಶ್, ಅಲಿ, ಪಿಹೆಚ್‌ಸಿಓ, ಅಂಬಮ್ಮ, ಮಲ್ಲಮ್ಮ, ರಾಧಾ, ಹುಲಿಗೆಮ್ಮ, ಸಿಹೆಚ್‌ಓ ಪ್ರತಾಪ್, ಸಿದ್ದಲಿಂಗ, ಶಾರದಾ, ಎಪಡಮಾಲಿಜಿಷ್ಟ್ ಅಶೋಕ ಮಡಿಕರ್, ಫಾರ್ಮಸಿ ಅಧಿಕಾರಿ ಜುಬೇರ್, ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ನೇಮಕಾತಿ ಪ್ರಕಟಣೆ


KSLSA ನೇಮಕಾತಿ 2026–29 ಉಪ ಕಾನೂನು ನೆರವು ರಕ್ಷಣಾ ಕೌನ್ಸೆಲ್ ಹುದ್ದೆಗಳಿಗೆ ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಏಪ್ರಿಲ್ 27, 2026 KSLSA ನೇಮಕಾತಿ 2026: 29 ಉಪ ಕಾನೂನು ನೆರವು ರಕ್ಷಣಾ ಕೌನ್ಸೆಲ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರವು ಏಪ್ರಿಲ್ 2026 ರ KSLSA ಅಧಿಕೃತ ಅಧಿಸೂಚನೆಯ ಮೂಲಕ ಉಪ ಕಾನೂನು ನೆರವು ರಕ್ಷಣಾ ಕೌನ್ಸೆಲ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 08–ಮೇ–2026 ರಂದು ಅಥವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 27–04–2026 ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 08–ಮೇ–2026 ಸದಸ್ಯ ಕಾರ್ಯದರ್ಶಿ, ಆಐಖಂ ಅವರಿಂದ ಅರ್ಜಿಗಳ ಪರಿಶೀಲನೆ: 30 ಮೇ 2026 ಆಯ್ಕೆ ಸಮಿತಿಯ ಅಧ್ಯಕ್ಷರ ಮುಂದೆ ಅಭ್ಯರ್ಥಿಗಳ ಪಟ್ಟಿಯನ್ನು ಸಲ್ಲಿಸುವುದು: 06 ಜೂನ್ 2026 ಅಭ್ಯರ್ಥಿಗಳ ಸಂದರ್ಶನ: 20 ಜೂನ್ 2026 ಅಧಿಕೃತ ವೆಬ್‌ಸೈಟ್: kslsa.kar.nic.in

## ಭಕ್ತಸಾಗರದ ಮಧ್ಯ ವಿಜೃಂಭಿಸಿದ ರಥೋತ್ಸವ ಬಳಗಾನೂರು ಜಾತ್ರೆ ಭಕ್ತಿ, ಭರವಸೆ, ಭವ್ಯತೆಗೆ ಜೀವಂತ ಸಾಕ್ಷಿ

ನೈಜ್ಯ ದೆಸೆ ನ್ಯೂಸ್

**ಬಳಗಾನೂರು: ಭಕ್ತಿಯ ಅಲೆಗಳು ಹರಿದು ಬಂದಾಗ ಊರು ಒಂದು ದೇವಾಲಯವಾಗುತ್ತದೆ,ಅದೇ ದೃಶ್ಯ ಶುಕ್ರವಾರ ಸಂಜೆ ಬಳಗಾನೂರಿನಲ್ಲಿ ಕಂಡುಬಂತು. ಆರಾಧ್ಯ ದೈವ ಮಾರುತೇಶ್ವರನ ರಥೋತ್ಸವವು ಭಕ್ತಸಾಗರದ ನಡುವೆ ಅದ್ದೂರಿಯಾಗಿ ಜರುಗಿ, ಭಕ್ತಿ?ಭಾವನೆಗಳ ಹಬ್ಬವಾಗಿ ಮಿಂಚಿತು.ಮಸ್ಕಿ ತಹಸಿಲ್ದಾರರು ಹಾಗೂ ದೇವಸ್ಥಾನ ಸಮಿತಿ ಅಧ್ಯಕ್ಷರಾದ ಮಂಜುನಾಥ ಬೋಗಾವತಿ, ಹಳೆಕೋಟೆ ತಾತ ಶ್ರೀ ಮಲ್ಲಿಕಾರ್ಜುನ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಜಾತ್ರೆಗೆ ಚಾಲನೆ ನೀಡಲಾಯಿತು.**

ಈ ಸಂದರ್ಭದಲ್ಲಿ ಶಾಸಕ ಆರ್. ಬಸನಗೌಡ ತುರುವಿಹಾಳ ಹಾಗೂ ಮಾಜಿ ಶಾಸಕ ಪ್ರತಾಪಗೌಡ ಪಾಟೀಲ್ ,ಸಕಲ ಬಾಬತ್ತುದಾರರು ಮುಖಂಡರು ,ಉಪಸ್ಥಿತ–ರಿದ್ದು ಕಾರ್ಯಕ್ರಮಕ್ಕೆ ಕಳೆ ತುಂಬಿದರು. ಕಳೆದ ವರ್ಷಕ್ಕಿಂತ ಈ ಬಾರಿ ಭಕ್ತರ ಸಂಖ್ಯೆ ಹೆಚ್ಚಾಗಿ, ಊರಿನ ಪ್ರತಿಯೊಂದು ಬೀದಿಯೂ ಜನಸಾಗರದಿಂದ ಕಿಕ್ಕಿರಿದು ತುಂಬಿತ್ತು.



ವಿಶೇಷವಾಗಿ ನವ ದಂಪತಿಗಳ ಸಂಭ್ರಮ, ಜಾತ್ರೆಗೆ ಮತ್ತಷ್ಟು ಮಧುರತೆಯನ್ನು ಸೇರಿಸಿತು. ಶಾಸಕ ಬಸನಗೌಡ ತುರುವಿಹಾಳ ಜಾತ್ರೆಗೆ ಆಗಮಿಸುವ ವೇಳೆ ಟ್ರಾಫಿಕ್ ಜಾಮ್‌ನೊಳಗೆ ಸಿಲುಕಿ ಸ್ವಲ್ಪ ಹೊತ್ತು ಪರದಾಡಿದ ಘಟನೆ, ಭಕ್ತರ ಹರಿವು ಎಷ್ಟರ ಮಟ್ಟಿಗೆ ಇತ್ತು ಎಂಬುದಕ್ಕೆ ಸಾಕ್ಷಿಯಾಯಿತು.

ಈ ವರ್ಷದ ವಿಶೇಷ ಆಕರ್ಷಣೆ ಎಂದರೆ ಡ್ರೋನ್ ಮೂಲಕ ರಥಕ್ಕೆ ಪುಷ್ಪಾರ್ಚನೆ! ಆಕಾಶದಿಂದ ಸುರಿದ ಹೂವಿನ ಮಳೆ, ಭಕ್ತರ ಮನದಲ್ಲಿ ಭಕ್ತಿಯ ನವಮಾಲೆಯನ್ನು ಹೆಣೆದಂತಾಯಿತು. ಪಟ್ಟಣ ಪಂಚಾಯ್ತಿಯ ವತಿಯಿಂದ ಅಧ್ಯಕ್ಷರು, ಉಪಾಧ್ಯಕ್ಷರು, ಮುಖ್ಯಾಧಿಕಾರಿ ಹಾಗೂ ಸದಸ್ಯರು ಬೃಹತ್ ಹಾರವನ್ನು ಸಮರ್ಪಿಸಿ ಗೌರವ ಸಲ್ಲಿಸಿದರು. ಹೋರಾಟಗಾರ ಮೌನೇಶ ಡಿ.ಎಸ್. ಅವರಿಂದ ಆಕಾಶಕ್ಕೆ ಚಿಮ್ಮಿದ ಬಾಣಬಿರುಸುಗಳು ಜಾತ್ರೆಯ ಸಂಭ್ರಮವನ್ನು ಗಗನಕ್ಕೇರಿಸಿದವು. ಅಂಗಡಿ?ಮುಂಗಟ್ಟುಗಳ ಸಾಲು, ಬೆಳಕುಗಳ ಕಂಗೊಳ, ಊರನ್ನು ಒಂದು ಮಿನುಗುವ ಹಬ್ಬದ ಮೇಳವಾಗಿಸಿತು.

ರಥೋತ್ಸವದ ಸಂದರ್ಭದಲ್ಲಿ ಯಾವುದೇ ಅವಘಡ ಸಂಭವಿಸದಂತೆ ಆರಕ್ಷಕ ಪಡೆ ಸೂಕ್ತ ಬಂದೋಬಸ್ತ್ ಕೈಗೊಂಡಿತ್ತು ಜೊತೆಗೆ ಮುಂಜಾಗ್ರತಾಕ್ರಮವಾಗಿ ಬೆಂಕಿ ನಂದಿಸುವ ವಾಹನ,ಆ?ಯಂಬ್ಯೂಲೆನ್ಸ್,ಮಾರ್ಗ ದಾಳುಗಳು,ಸನ್ನದ್ದ ಸ್ಥಿತಿಯಲ್ಲಿ ಇರುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಯಾಗಿ ನೆರವೇ–ರಿಸಿದರು.. ಜಾತ್ರೆಗೆ ಆಗಮಿಸಿದ ಭಕ್ತರಿಗೆ ಪ್ರಸಾದ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಮಾಡಲಾಗಿದ್ದು, ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.ಭಕ್ತರುಸ ಾಗರೋಪಾದಿಯಲ್ಲಿ ಸೇರಿ ಮಾರುತೇಶ್ವರನ ಕೃಪೆಗೆ ಪಾತ್ರರಾಗಿದ್ದು, ಬಳಗಾನೂರು ಜಾತ್ರೆ ಮತ್ತೊಮ್ಮೆ ಭಕ್ತಿ, ಸಂಪ್ರದಾಯ ಮತ್ತು ಸಮುದಾಯದ ಶಕ್ತಿಯನ್ನೇ ಸಾರಿತು.

ವರದಿ: ಸುರೇಶ್ ಬಳಗಾನೂರು

## ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದ ಜೆ.ಕೆ.ವೆಲ್ಫೇರ್ ಚಾರೀಟೇಬಲ್ ಟ್ರಸ್ಟ್ (ರಿ) ವತಿಯಿಂದ 2025–26ನೇ ಸಾಲಿನಲ್ಲಿ ನಡೆದ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಉರ್ದು ಮಾಧ್ಯಮದ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ ಇಂದು(ಮೇ 3) ರವಿವಾರ ನಡೆಯಲಿದೆ.**



ಬೆಳಿಗ್ಗೆ 10:00 ಘಂಟೆಗೆ ಪಟ್ಟಣದ ಸ್ಟಾರ್ ಫಂಕ್ಷನ್ ಹಾಲ್ (ಕೊರ್ತಿ ಶಾದಿ ಹಾಲ್)ನಲ್ಲಿ ನಡೆಯಲಿರುವ ಈ ಸನ್ಮಾನ ಕಾರ್ಯಕ್ರಮದಲ್ಲಿ ಸಮಾಜದ ಗಣ್ಯರು, ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು, ಶಿಕ್ಷಕರು ಹಾಗೂ ಪೋಷಕರು ಭಾಗವಹಿಸಲಿದ್ದಾರೆ. ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಸಮುದಾಯದ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲು ಹಮ್ಮಿಕೊಂಡ ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಟ್ರಸ್ಟ್ ನ ಅಧ್ಯಕ್ಷ ಜಾವೀದ ಕೆಂಭಾವಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾಧ್ಯಮಗಳ ಮುಕ್ತವಾಗಿ ಕೆಲಸ ಮಾಡಲು ಬಿಡಬೇಡಿ ಅಧಿಕಾರಿಗಳು. ದೋರನಹಳ್ಳಿ ಪಟ್ಟಣ ಪಂಚಾಯಿತಿ ಅಧಿಕಾರಿಗಳ ಮೇಲೆ ಕ್ರಮಕ್ಕೆ ಆಗ್ರಹ: ಮಲ್ಲಪ್ಪ ಸಂಕಿನ

ನೈಜ್ಯ ದೆಸೆ ನ್ಯೂಸ್

**ಯಾದಗಿರಿ: ಪತ್ರಿಕೋದ್ಯಮದ ಸ್ವಾತಂತ್ರ್ಯ ಹರಣ ಮಾಡಲು ಮುಂದಾಗಿರುವ ದೋರನಹಳ್ಳಿ ಪಟ್ಟಣ ಪಂಚಾಯಿತಿ ಅಧಿಕಾರಿಗಳ ಮೇಲೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾನೂನಿನ ಮೂಲಕ ಕಠಿಣ ಕ್ರಮ ಕೈಗೊಳ್ಳಲು ಮುಂದಾಗಬೇಕು ಎಂದು ಯಾದಗಿರಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಮಲ್ಲಪ್ಪ ಸಂಕಿನ ಆಗ್ರಹಿಸಿದ್ದಾರೆ.**

ಈ ಕುರಿತು ಪತ್ರಿಕೆ ಹೇಳಿಕೆ ನೀಡಿರುವ ಅವರು. ಶಹಾಪುರ ತಾಲೂಕು ವ್ಯಾಪ್ತಿಯ ದೂರನಹಳ್ಳಿ ಪಟ್ಟಣ ಪಂಚಾಯಿತಿ ಬರುತ್ತದೆ. ಆದರೆ ಅಲ್ಲಿನ ಅಧಿಕಾರಿಗಳು ಪತ್ರಕರ್ತರಿಗೆ ಮುಕ್ತವಾಗಿ ಕೆಲಸ ಮಾಡಲು ಬಿಡುತ್ತಿಲ್ಲ ಎಂದರು. ಪಟ್ಟಣ ಪಂಚಾಯತಿ ವ್ಯಾಪ್ತಿಯ ಕುರಿತು



ಸಮಸ್ಯೆಗಳು ಕುರಿತು ಬೆಳಕ ಚೆಲುವ ಕೆಲಸ ಪತ್ರಕರ್ತರ ಮಾಡುತ್ತಿದ್ದಾರೆ. ಆದರೆ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಮಾತ್ರ ಸಮಸ್ಯೆಗಳು ಕುರಿತು ಬರೆಯದಂತೆ ಪರೋಕ್ಷವಾಗಿ ಒತ್ತಡ ಇರುವ ಕೆಲಸ ಮಾಡುತ್ತಿದ್ದಾರೆ ಎಂದರು. ಸಮಸ್ಯೆಗಳ ಕುರಿತು ಬೆಳಕು ಚೆಲುವ ಮೂಲಕ ಪತ್ರಕರ್ತರು ಸರಕಾರದ ಗಮನ ಸೆಳೆಯುವ ಕೆಲಸ ಮಾಡುತ್ತಿದ್ದಾರೆ.

ಇತ್ತ ಅಧಿಕಾರಿಗಳು ಪತ್ರಕರ್ತರ ಮೇಲೆ ವಿನಾಕಾರಣ ದಬ್ಬಾಳಿಕೆ ಮಾಡುವ ಕೆಲಸ ಮಾಡುತ್ತಿದ್ದಾರೆ ಎಂದರು. ಸಮಸ್ಯೆಗಳ ಕುರಿತು ಯಾವುದೇ ಸುದ್ದಿ ಬರೆಯಬಾರದು ಎಂಬುದು ಅಧಿಕಾ–ರಿಗಳು ನಡೆಯಾಗಿದೆ. ಮಾಧ್ಯಮಗಳು ಮುಕ್ತವಾಗಿ ಕೆಲಸ ಮಾಡುತ್ತಿವೆ. ಇದನ್ನು ದೂರನಹಳ್ಳಿ ಪಟ್ಟಣ ಪಂಚಾಯಿತಿ ಅಧಿಕಾ–ರಿಗಳು ಸಹಿಸಿಕೊಳ್ಳಲು ಆಗುತ್ತಿಲ್ಲ ಎಂದರು. ಜಿಲ್ಲೆಯಲ್ಲಿ ಮಾಧ್ಯಮಗಳು ಮುಕ್ತವಾಗಿ ಕೆಲಸ ಮಾಡಲು ಆಗದಂತ ಪರಿಸ್ಥಿತಿಯನ್ನು ಅಧಿಕಾ–ರಿಗಳು ತರುವಂತಹ ಕೆಲಸ ಮಾಡುತ್ತಿರುವುದು ಮಾರಕ ಬೆಳವಣಿಗೆಯಾಗಿದೆ ಎಂದರು.

ಜಿಲ್ಲಾಡಳಿತ ಇದನ್ನು ಕೂಡಲೇ ಗಂಭೀರವಾಗಿ ಪರಿಗಣಿಸಬೇಕು. ಮಾಧ್ಯಮಗಳ ಮೇಲೆ ಪರೋಕ್ಷವಾಗಿ ಹಿಡಿತವನ್ನು ಸಾಧಿಸಬೇಕು ಎಂದು ಪಣತೊಟ್ಟವರ ಮೇಲೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ ರು. ಮುಖ್ಯಮಂತ್ರಿ ಸಿದ್ದರಾಮಯ್ಯನವರ ವ್ಯಾಪ್ತಿಯಲ್ಲಿ ವಾರ್ತಾ ಇಲಾಖೆ ಒಳಪಟ್ಟಿದೆ. ಹೀಗಾಗಿ ಅವರ ಮೇಲೆ ಶೀಘ್ರವೇ ಕ್ರಮ ಕೈಗೊಂಡು ಇಂತ ಘಟನೆ ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕು ಎಂದರು. ನಮ್ಮ ಬೇಡಿಕೆ ಈಡೇರಬೇಕು ವಿಳಂಬ ಮಾಡಿದರೆ. ಉಗ್ರ ಹೋರಾಟ ಮಾಡಲಾಗುವುದೆಂದು ಎಚ್ಚರಿಸಿದರು.

## ಆರ್ಥಿಕ ಸ್ಥಿತಿ ಹಳಿಗೆ ತನ್ನಿ : ಸಿಎಂಗೆ ಬಿವೈವಿ ಆಗ್ರಹ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ರಾಜಕೀಯ ಮೇಲಾಟವನ್ನು ಬದಿಗಿಟ್ಟು ಹಳಿತಪ್ಪಿರುವ ರಾಜ್ಯದ ಆರ್ಥಿಕ ಸ್ಥಿತಿಯನ್ನು ಸರಿದಾರಿಗೆ ತರುವತ್ತ ಗಮನಹರಿಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಆಗ್ರಹಿಸಿದ್ದಾರೆ.**



ಅಧಿಕಾರಿದ ಹಪಾಹಪಿಗೆ ರಾಜ್ಯದ ಬೊಕ್ಕಸವನ್ನು ಖಾಲಿ ಮಾಡಿ ಮುಂದಿನ ಪೀಳಿಗೆಯನ್ನು ಸಾಲದ ಸುಳಿಗೆ ದೂಡುವುದು ಯಾವ ನ್ಯಾಯ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ರಾಜ್ಯದ ಒಳಿತಿಗಾಗಿ ನಿಮ್ಮ ರಾಜಕೀಯ ಮೇಲಾಟ ಬದಿಗಿಟ್ಟು ರಾಜ್ಯದ ಆರ್ಥಿಕ ಸ್ಥಿತಿಯನ್ನು ಹಳಿಗೆ ತರುವತ್ತ ಗಮನಹರಿಸಿ ಎಂದು ಅವರು ಒತ್ತಾಯಿಸಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಟ್ವೀಟ್ ಮಾಡಿರುವ ಅವರು ಅವೈಜ್ಞಾನಿಕ ಆರ್ಥಿಕ ನಿರ್ವಹಣೆಯಿಂದಾಗಿ ರಾಜ್ಯದಲ್ಲಿ ಆದಾಯ ಸ್ವೀಕೃತಿಯ ಶೇ. 15ಕ್ಕಿಂತ ಹೆಚ್ಚು ಹಣ ಬಡ್ಡಿ ಪಾವತಿಗೆ ವಯ್ಯವಾಗುತ್ತಿದೆ. ರಾಜ್ಯದ ಶೇ. 0.7ರಷ್ಟು ಆದ–ಾಯ ಕೊರತೆ ಎದುರಿಸುತ್ತಿರುವುದು ಆತಂಕಕಾರಿ ಸಂಗತಿ. ಈ ಬಗ್ಗೆ ಕೇಂದ್ರ ಸರ್ಕಾರ ಕಳವಳ ವ್ಯಕ್ತಪಡಿಸಿದೆ. ಈ ಬೆಳವಣಿಗೆ ಮುಂದಿನ ದಿನಗಳಲ್ಲಿ ರಾಜ್ಯದ ಆರ್ಥಿಕ ಸಂಕಷ್ಟಕ್ಕೆ ತುತ್ತಾಗುವುದಕ್ಕೆ ಕಾರಣವಾಗಬಹುದು ಎಂದು ಎಚ್ಚರಿಸಿದೆ ಎಂದಿದ್ದಾರೆ. ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ರಾಜಕೀಯ ಪರಿಗಣನೆ ಮತ್ತು ಮೇಲಾಟಗಳಿಂದಾಗಿ ರಾಜ್ಯದ ಅಭಿವೃದ್ಧಿ ಹಾಗೂ ಆದ–ೃತೆ ವಲಯಗಳಿಗೆ ಹಣವಿಲ್ಲದಂತಾಗಿದೆ. ಎದುರಾಗಬಹುದಾದ ಯಾವುದೇ ತುರ್ತುಪರಿಸ್ಥಿತಿಗಳಿಗೆ ಸ್ಪಂದಿಸುವ ಸಾಮರ್ಥ್ಯ ರಾಜ್ಯ ಸರ್ಕಾರ ಕಳೆದುಕೊಳ್ಳುತ್ತಿದೆ ಎಂದು ಅವರು ಹೇಳಿದ್ದಾರೆ.

## ರಾಯಚೂರು, ದೇವದುರ್ಗ: ಪ್ರಥಮ ವರ್ಷದ ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯ ರಾಯಚೂರು ಹಾಗೂ ದೇವದುರ್ಗದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 2026–27ನೇ ಸಾಲಿನಲ್ಲಿ ಪ್ರಥ–'ಮ ವರ್ಷದ ಡಿಪ್ಲೋಮಾ ಪ್ರವೇಶಾತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.**

ಆಸಕ್ತರು ಎಸ್.ಎಸ್.ಎಲ್.ಸಿ ಅಥ–'ವಾ ತತ್ಸಮಾನ ಪರೀಕ್ಷೆಯಲ್ಲಿ ಪಾಸಾಗಿರುವ ಅರ್ಹ ಅಭ್ಯರ್ಥಿಗಳು ಡಿಪ್ಲೋಮಾ ಇನ್ ಸಿವಿಲ್ ಇಂಜಿನಿಯರಿಂಗ್, ಡಿಪ್ಲೋಮಾ ಇನ್ ಇ.ಇ ಇಂಜಿನಿಯರಿಂಗ್, ಡಿಪ್ಲೋಮಾ ಇನ್ ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್, ಡಿಪ್ಲೋಮಾ ಇನ್ ಮೆಕಾನಿಕಲ್, ಡಿಪ್ಲೋಮಾ ಇನ್ ವಿದ್ಯುತ್ ಮತ್ತು ಸಂವಹನ ಇಂಜಿನಿಯ–ರಿಂಗ್ ನಲ್ಲಿ ಪ್ರವೇಶ ಪಡೆಯಬಹುದಾಗಿದೆ. ಅರ್ಹ ಅಭ್ಯರ್ಥಿಗಳು ಕಾಲೇಜು ಮತ್ತು ತಾಂತ್ರಿಕ




ಶಿಕ್ಷಣ ಇಲಾಖೆ ಮತ್ತು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್‌ವಿಳಾಸ: https://dtetech.karnataka.gov.in/kartechnical ಅಥವಾ dtek.karnataka.gov.in ನಲ್ಲಿ ದಿನಾಂಕ: 16–05–2026ರ ಸಂಜೆ 05.30ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಹ ಅಭ್ಯರ್ಥಿಗಳ ಮೆರಿಟ್ ಪಟ್ಟಿ ಪ್ರಕಟಣೆಯನ್ನು ಅಧೀಕೃತ ವೆಬ್‌ಸೈಟ್‌ಗಳ ಮೂಲಕ ದಿನಾಂಕ: 16–05–2026 ಸಂಜೆ 06ಗಂಟೆಯ ನಂತರ ಪ್ರಕಟಿಸಲಾಗುವುದು. ಮೆರಿಟ್ ಪಟ್ಟಿ ಆಕ್ಷೇಪಣೆಗೆ/ಪರಿಷ್ಕರಣೆ/ತಿದ್ದುಪಡೆ ಮಾಡಲು ಇಚ್ಛಿಸಿದಲ್ಲಿ ದಿನಾಂಕ: 18–05–2025ರ ಬೆಳಿಗ್ಗೆ 10ರಿಂದ ಸಂಜೆ 04ರವರೆಗೆ ಅವಕಾಶ ನೀಡಲಾಗಿದೆ.

ಅಂತಿಮ ಮೆರಿಟ್ ಪಟ್ಟಿ ಪ್ರಕಟಣೆಯನ್ನು ದಿನಾಂಕ:18–05–2026ರ ಸಂಜೆ 05.30ರ ನಂತರ ಪ್ರಕಟಿಸಲಾಗುವುದು. ಸೀಟು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳು ನಿಗದಿತ ಶುಲ್ಕದೊಂದಿಗೆ ಪ್ರವೇಶ ಪಡೆಯಲು ದಿನಾಂಕ: ದಿನಾಂಕ:23–05–2026 ರಿಂದ 25–05–2026 ರವರೆಗೆ ಅವಕಾಶ ನೀಡಲಾಗಿದೆ. ಭರ್ತಿ ಆಗದೇ ಉಳಿಕೆ ಸೀಟುಗಳನ್ನು ಮೊದಲು ಬಂದವರಿಗೆ ಮೊದಲು ಆದ್ಯತೆ ಮೇರೆಗೆ ಪ್ರಾಚಾರ್ಯರ ಹಂತದಲ್ಲಿ ಆಫ್‌ಲೈನ್ ಮೂಲಕ ದಿನಾಂಕ:26–05–2026 ರಿಂದ 30–05–2026 ರವರೆಗೆ ಅವಕಾಶ ನೀಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್ ಸೈಟ್‌ನಲ್ಲಿ ಪ್ರಕಟಿಸಿರುವ ಇ–ಮಾಹಿತಿ ಪುಸ್ತಕದಲ್ಲಿನ ಅಂಶಗಳನ್ನು ಓದಿಕೊಳ್ಳುವುದು. ಅಥವಾ ಸರ್ಕಾರಿ ಪಾಲಿಟೆಕ್ನಿಕ್ ರಾಯಚೂರು ಅಥವಾ ದೇವದುರ್ಗದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಯಚೂರು ಜಿಲ್ಲೆಯಲ್ಲಿ ನೀಟ್–ಯುಜಿ 2026 ಪರೀಕ್ಷೆ ಹಿನ್ನೆಲೆ ನಿಷೇಧಾಜ್ಞೆ ಜಾರಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು, ಮೇ 02, 2026: ನಾಳೆ ಅಂದರೆ ಮೇ 3, 2026 ರಂದು ನಡೆಯಲಿರುವ ನೀಟ್–ಯುಜಿ (NEET-UG) 2026 ಪರೀಕ್ಷೆಗಳನ್ನು ಅತ್ಯಂತ ಪಾರದರ್ಶಕವಾಗಿ ಮತ್ತು ಶಾಂತಿಯುತವಾಗಿ ನಡೆಸುವ ಉದ್ದೇಶದಿಂದ ರಾಯಚೂರು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಶ್ರೀ ನಿತೀಶ್ ಕೆ. ಅವರು ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ನಿಷೇಧಾಜ್ಞೆ ಜಾ–ರಿಗೊಳಿಸಿ ಆದೇಶ ಹೊರಡಿಸಿದ್ದಾರೆ.**



ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ (BNSS) 2023 ರ ಕಲಂ 163 ರ ಅಡಿಯಲ್ಲಿ ತಮಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ರಾಯಚೂರು ನಗರದ ಒಟ್ಟು 11 ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಈ ಕೆಳಗಿನ ನಿರ್ಬಂಧಗಳನ್ನು ವಿಧಿಸಲಾಗಿದೆ. 200 ಮೀಟರ್ ವ್ಯಾಪ್ತಿ: ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ಪ್ರದೇಶವನ್ನು 'ನಿಷೇಧಿತ ಪ್ರದೇಶ'ವೆಂದು ಘೋಷಿಸಲಾಗಿದೆ. ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿರುವ ಎಲ್ಲಾ ಜೆರಾಕ್ಸ್ ಅಂಗಡಿಗಳು, ಕಂಪ್ಯೂಟರ್ ಸೆಂಟ–ರ್‌ಗಳು ಹಾಗೂ ಸೈಬರ್ ಕೆಫೆಗಳನ್ನು ಕಡ್ಡಾಯವಾಗಿ ಮುಚ್ಚುವಂತೆ ಆದೇಶಿಸಲಾಗಿದೆ.

ಪರೀಕ್ಷಾ ಸಮಯದಲ್ಲಿ ಯಾವುದೇ ರೀತಿಯ ನಕಲು ಅಥವಾ ಅವ್ಯವಹಾರಗಳು ನಡೆಯದಂತೆ ತಡೆಯಲು ಮತ್ತು ಪರೀಕ್ಷೆಯ ಪಾವಿತ್ರ್ಯತೆಯನ್ನು ಕಾಪಾಡಲು ಈ ಕ್ರಮ ಕೈಗೊಳ್ಳಲಾಗಿದೆ. ಈ ಆದೇಶವು ಕೇವಲ ಪರೀಕ್ಷೆ ನಡೆಯುವ ದಿನವಾದ ಮೇ 03, 2026 ರಂದು ಮಾತ್ರ ಜಾರಿಯಲ್ಲಿರುತ್ತದೆ.

ಪೊಲೀಸ್ ವರಿಷ್ಠಾಧಿಕಾರಿಗಳು, ಸಹಾಯಕ ಆಯುಕ್ತರು, ತಹಶೀಲ್ದಾರರು ಹಾಗೂ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಈ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲು ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ.

## ಸನ್ ರೈಸ್ ಕಾಲೇಜಿನ ಶನಿವಾರದ ವಿಶೇಷ ಉಪನ್ಯಾಸ ನೀಡಿದ ಡಾ.ಶಿವಕುಮಾರ್ ಪೂಜಾರಿ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ಸನ್ ಡಿ ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕಾಲೇಜು ಸಿಂಧನೂರಿನ ವತಿಯಿಂದ ಪ್ರತೀ ಶನಿವಾರದಂತೆ ನಡೆಯುವ ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನ ಉಪನ್ಯಾಸ ಕಾರ್ಯಕ್ರಮದಲ್ಲಿ, ದಿನಾಂಕ ಮೇ 2, 2026 ಶನಿವಾರದಂದು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಯಿತು.**

ಈ ಕಾರ್ಯಕ್ರಮಕ್ಕೆ ಸಾಯಿ ಅಮೈರಾ ಆಸ್ಪತ್ರೆ, ಸಿಂಧನೂರಿನ ಖ್ಯಾತ ವೈದ್ಯರಾದ ಡಾ. ಶಿವಕುಮಾರ್ ಪೂಜಾರಿ (MBBS, MD ಜನರಲ್ ಮೆಡಿಸಿನ್) ಅವರು ಮುಖ್ಯ ಅತಿಥಿಯಾಗಿ ಆಗಮಿಸಿ "ದೈಹಿಕ ಪರಿಶೀಲನೆ" ಎಂಬ ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಿದರು. ತಮ್ಮ ಉಪನ್ಯಾಸದಲ್ಲಿ ಅವರು ದೈಹಿಕ ಪರಿಶೀಲನೆಯ ಮಹತ್ವವನ್ನು ವಿವರಿಸಿ, ರೋಗಿಯನ್ನು ಸರಿಯಾದ ರೀತಿಯಲ್ಲಿ ಪರೀಕ್ಷಿಸುವುದು ವೈದ್ಯಕೀಯ ಕ್ಷೇತ್ರದಲ್ಲಿ ಅತ್ಯಂತ ಮುಖ್ಯವೆಂದು ತಿಳಿಸಿದರು. ರೋಗಿಯ ಆರೋಗ್ಯ



ಸ್ಥಿತಿಯನ್ನು ಅರಿಯಲು ನರ್ಸಿಂಗ್ ವಿದ್ಯಾರ್ಥಿಗಳು ಗಮನ, ಸ್ಪರ್ಶ, ಶ್ರವಣ ಮತ್ತು ತಟ್ಟುವಿಕೆ ವಿಧಾನಗಳನ್ನು ಸರಿಯಾಗಿ ತಿಳಿದುಕೊಳ್ಳಬೇಕು ಎಂದು ಹೇಳಿದರು.

ದೈಹಿಕ ಪರಿಶೀಲನೆ ಸರಿಯಾಗಿ ಮಾಡಿದರೆ ಅನೇಕ ರೋಗಗಳನ್ನು ಪ್ರಾರಂಭಿಕ ಹಂತದಲ್ಲೇ ಗುರುತಿಸಿ ಸೂಕ್ತ ಚಿಕಿತ್ಸೆ ನೀಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.ಅವರು ವಿದ್ಯಾರ್ಥಿಗಳಿಗೆ ಆತ್ಮವಿಶ್ವಾಸದ ಮಹತ್ವವನ್ನು ಒತ್ತಿಹೇಳಿ, "ಒಬ್ಬ ಉತ್ತಮ ನರ್ಸ್ ರೋಗಿಗೆ ಅರ್ಧ ಚಿಕಿತ್ಸೆ ನೀಡುವವರಂತೆ. ನಿಮ್ಮ ಮಾತು, ನಿಮ್ಮ ಸೇವಾ ಮನೋಭಾವ ಹಾಗೂ ನಿಮ್ಮ



ಪರಿಶೀಲನೆ ರೋಗಿಯ ಆರೋಗ್ಯ ಸುಧಾರಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ" ಎಂದು ಹೇಳಿದರು.

ಜೊತೆಗೆ ನರ್ಸಿಂಗ್ ವೃತ್ತಿಯ ಮಾನವೀಯ ಮೌಲ್ಯಗಳು, ಸೇವಾ ಮನೋಭಾವ ಮತ್ತು ಜವಾಬ್ದಾರಿಗಳ ಬಗ್ಗೆ ವಿವರಿಸಿದರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಸಂಸ್ಥೆಯ ಅಧ್ಯಕ್ಷರಾದ ಇರ್ಫಾನ್ ಕೆ ಅವರು ಮಾತನಾಡಿ, ಇಂದಿನ ವಿಶೇಷ ಉಪನ್ಯಾಸದಲ್ಲಿ ಡಾ. ಶಿವಕುಮಾರ್ ಪೂಜಾರಿ ಅವರು ವಿದ್ಯಾರ್ಥಿಗಳಿಗೆ ದೈಹಿಕ ಆರೋಗ್ಯ ಪರಿಶೀಲನೆಯ ಬಗ್ಗೆ ಸ್ಪಷ್ಟ ಹಾಗೂ ಉಪಯುಕ್ತ ಮಾಹಿತಿ ನೀಡಿರುವುದು ಶ್ಲಾಘನೀಯವಾಗಿದೆ ಎಂದು ಹೇಳಿದರು. ಅವ–ರಿಂದ ವಿದ್ಯಾರ್ಥಿಗಳಿಗೆ ಉತ್ತಮ ಮಾರ್ಗದರ್ಶನ ದೊರೆತಿದ್ದು, ಸಂಸ್ಥೆಯ ಪರವಾಗಿ, ಕಾರ್ಯದರ್ಶಿಗಳ ಪರವಾಗಿ ಹಾಗೂ ಎಲ್ಲಾ ಉಪನ್ಯಾಸಕರ ಪರವಾಗಿ ಹೃತ್ಪೂರ್ವಕ ಧನ್ಯವಾದಗಳನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಇರ್ಫಾನ್ ಕೆ, ಲೋಟಸ್ ಕಾಲೇಜಿನ ಕಾರ್ಯದರ್ಶಿಗಳಾದ ಡಾ. ರಹಮಾನ್ ನಮಾಜ್ ಕಟ್ಟಿ, ನೂರ್ ನಮಾಜ್ ಕಟ್ಟಿ, ಆಸಿಫ್, ನರ್ಸಿಂಗ್ ಕಾಲೇಜಿನ ಪ್ರಾಚಾರ್ಯರಾದ ಲಾಜರ್ ಸಿರಿಲ್, ಪ್ಯಾರಾಮೆಡಿಕಲ್ ಪ್ರಾಚಾರ್ಯರಾದ ಚಕ್ರವರ್ತಿ, ಫಾರ್ಮಸಿ ಪ್ರಾಚಾರ್ಯರಾದ ವಾಸಿಮ ಹೂಸೇನ್ ಹಾಗೂ ಉಪನ್ಯಾಸಕರಾದ ರಾಜೇಶ್, ಅಶು ಪಾಷಾ, ಸಂತೋಷಿ, ವೀರೇಶ್ವರಿ,ಸುಧಾ, ವೀರೇಶ್, ಶೋಭಾ, ರಾಧಿಕಾ, ಚೈತ್ರ, ಸುರೇಶ್ ಯಾದವ್, ದಿಲೀಪ್, ಹರ್ಷಿತಾ, ಸಾಗರ್, ಪುಟ್ಟರಾಜು, ಮೂಸಾ ಹಾಗೂ ಅನೇಕ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಬಿ. ಟೆಕ್. ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ ಅವಲೋಕನ

ಬಿ. ಟೆಕ್. ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆಯಲ್ಲಿ ಅವಲೋಕನ ಸೈದ್ಧಾಂತಿಕ ಜ್ಞಾನ ಮತ್ತು ಪ್ರಾಯೋಗಿಕ ಅನುಭವದ ನಡುವೆ ಅತ್ಯುತ್ತಮ ಸಮತೋಲನವನ್ನು ಸಾಧಿಸುವ ಉದ್ದೇಶಪೂರ್ವಕ ಒತ್ತು ನೀಡುವ ಮೂಲಕ, ಈ ಕಾರ್ಯಕ್ರಮವು ಕೌಶಲ್ಯಪೂರ್ಣ ವ್ಯಕ್ತಿಗಳಿಗೆ ಹೆಚ್ಚುತ್ತಿರುವ ಉದ್ಯಮದ ಬೇಡಿಕೆಯನ್ನು ಪೂರೈಸಲು ವಿನ್ಯಾಸಗೊಳಿಸಲಾಗಿದೆ. ಇದು ಅಲ್ಗಾರಿದಮ್‌ಗಳು ಮತ್ತು ವಿಧಾನಗಳ ಸಮಗ್ರ ತಿಳುವಳಿಕೆಯನ್ನು ಮತ್ತು ಅಲ್ ವ್ಯವಸ್ಥೆಗಳನ್ನು ಅಭಿವೃದ್ಧಿಪಡಿಸುವಲ್ಲಿ ಸ್ವಾಧೀನಪಡಿಸಿಕೊಂಡ ಡೇಟಾದ ಕಾರ್ಯತಂತ್ರದ ಏಕೀಕರಣವನ್ನು ಖಚಿತಪಡಿಸುತ್ತದೆ. ಅವಧಿ ಬಿ. ಟೆಕ್. (ನಿಯಮಿತ): ನಾಲ್ಕು ವರ್ಷಗಳು / ಎಂಟು ಸೆಮಿಸ್ಟರ್‌ಗಳು ಬಿ. ಟೆಕ್. (ಲ್ಯಾಟರಲ್): ಮೂರು ವರ್ಷಗಳು / ಆರು ಸೆಮಿಸ್ಟರ್‌ಗಳು ಅರ್ಹತೆ ಬಿ. ಟೆಕ್. (ನಿಯಮಿತ) ಮಾನ್ಯತೆ ಪಡೆದ ಮಂಡಳಿ / ಮಂಡಳಿಯಿಂದ 10+2 ಉತ್ತೀರ್ಣತೆ, ಭೌತಶಾಸ್ತ್ರ ಮತ್ತು ಗಣಿತವನ್ನು ಕಡ್ಡಾಯ ವಿಷಯಗಳಾಗಿ ಕನಿಷ್ಠ 50% ಅಂಕಗಳೊಂದಿಗೆ, ರಸಾಯನಶಾಸ್ತ್ರ / ಜೈವಿಕ ತಂತ್ರಜ್ಞಾನ / ಜೀವಶಾಸ್ತ್ರ / ತಾಂತ್ರಿಕ ವೃತ್ತಿಪರ ವಿಷಯಗಳಲ್ಲಿ ಒಂದನ್ನು ಕಡ್ಡಾಯವಾಗಿ ಹೊಂದಿರಬೇಕು. ಜೆಇಇ (ಮುಖ್ಯ); ಜೆಇಇ (ಸುಧಾರಿತ); ಕರ್ನಾಟಕ ಸಿಇಟಿ; ಕಾಮೆಡ್-ಕೆ; ಎಯುಇಇಟಿ (ಅಲೈಯನ್ಸ್ ಪದವಿಪೂರ್ವ ಎಂಜಿನಿಯರಿಂಗ್ ಪ್ರವೇಶ ಪರೀಕ್ಷೆ); ಅಥವಾ ಯಾವುದೇ ಇತರ ರಾಜ್ಯ ಮಟ್ಟದ ಎಂಜಿನಿಯರಿಂಗ್ ಪ್ರವೇಶ ಪರೀಕ್ಷೆಯಲ್ಲಿ ಅಂಕಗಳು. ಬಿ. ಟೆಕ್. (ಲ್ಯಾಟರಲ್) ಸಂಬಂಧಿತ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ವಿಭಾಗದಲ್ಲಿ ಕನಿಷ್ಠ 50% ಅಂಕಗಳೊಂದಿಗೆ ಡಿಪ್ಲೊಮಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಯುಜಿಸಿ ವ್ಯಾಖ್ಯಾನಿಸಿದಂತೆ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಕನಿಷ್ಠ 50% ಅಂಕಗಳೊಂದಿಗೆ ಬಿ.ಎಸ್ಸಿ. ಪದವಿಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಗಣಿತವನ್ನು ಒಂದು ವಿಷಯವಾಗಿ 10+2 ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

ಎಸ್‌ಸಿ/ಎಸ್‌ಟಿಗೆ ಸೇರಿದವರಿಗೆ 5% ಅಂಕಗಳ ಸಡಿಲಿಕೆಅಥ-ವಾ ಅದಕ್ಕೆ ಸಮಾನವಾದ ದರ್ಜೆಯನ್ನು ಅನುಮತಿಸಬಹುದು

## ಸಿಂಧನೂರು: ಸನ್‌ರೈಸ್ ನರ್ಸಿಂಗ್ ಶಾಲೆಯಲ್ಲಿ ವಿದ್ಯಾರ್ಥಿ ನರ್ಸ್ ಸಮಿತಿ ಚುನಾವಣೆ ಯಶಸ್ವಿ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸಿಂಧನೂರಿನ ಸನ್‌ರೈಸ್ ನರ್ಸಿಂಗ್ ಕಾಲೇಜಿನಲ್ಲಿ ವಿದ್ಯಾರ್ಥಿ ನರ್ಸ್ ಸಮಿತಿಯ ಚುನಾವಣೆ ಅತ್ಯಂತ ಸಂಭ್ರಮ ಮತ್ತು ಶಿಸ್ತುಬದ್ಧವಾಗಿ ನಡೆಯಿತು. "ದಿ ಫೌಂಡೇಶನ್ ಆಫ್ ಫ್ಯೂಚರ್ ಲೀಡರ್ಸ್" ಎಂಬ ಘೋಷಣೆಯೊಂದಿಗೆ ಆಯೋಜಿಸಲಾದ ಈ ಚುನಾವಣೆಯಲ್ಲಿ ಒಟ್ಟು ಹದಿನೆಂಟು ವಿದ್ಯಾರ್ಥಿಗಳು ಸ್ಪರ್ಧಿಸಿದರು.**

ಮತದಾನದ ದಿನವನ್ನು ವಿಶೇಷವಾಗಿ ಆಚರಿಸಲಾಗಿ, ವಿದ್ಯಾರ್ಥಿಗಳು ಉತ್ಸಾಹದಿಂದ ಮತ ಚಲಾಯಿಸಿ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಅರಿತುಕೊಂಡರು. ಚುನಾವಣಾ ಪ್ರಕ್ರಿಯೆ ಶಾಂತಿಯುತವಾಗಿ ನಡೆಯುವಂತೆ ಉಪನ್ಯಾಸಕರಾದ ವೀರೇಶ್ ಮತ್ತು ಶೋಭಾ ಅವರು ಪೋಲಿಂಗ್ ಅಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಿದರು. ಮತ ಎಣಿಕೆ ಪ್ರಕ್ರಿಯೆಯಲ್ಲಿ ವೀರೇಶ್ವರಿ ಮತ್ತು ರಾಧಿಕಾ ಸೇರಿದಂತೆ ಅಭ್ಯರ್ಥಿಗಳಿಗೆ




ಸೂಚಕರಾಗಿ ಕಾರ್ಯನಿರ್ವಹಿಸಿದ ವಿದ್ಯಾರ್ಥಿಗಳು ಸಹಕರಿಸಿ ಚುನಾವಣೆಯನ್ನು ಪಾರದರ್ಶಕವಾಗಿ ನಡೆಸಲು ನೆರವಾದರು.

ಚುನಾವಣಾ ಫಲಿತಾಂಶದಲ್ಲಿ ತೃತೀಯ ವರ್ಷದ ಪ್ರವೀಣ್ ಹಾಗೂ ಸ್ಫೂರ್ತಿ, ದ್ವಿತೀಯ ವರ್ಷದ ಭರತ್ ಕುಮಾರ್ ಮತ್ತು ಅಶ್ವಿನಿ ಎಚ್, ಪ್ರಥಮ ವರ್ಷದ ಶೇಕ್ಷವಲಿ ಮತ್ತು ಶಾಂತ ಅವರು ವಿಜಯಶಾಲಿಗಳಾಗಿ ವಿದ್ಯಾರ್ಥಿಗಳ ಚುನಾಯಿತ ಪ್ರತಿನಿಧಿಗಳಾಗಿ ಆಯ್ಕೆಯಾಗಿದ್ದಾರೆ. ಈ ಸಂದರ್ಭದಲ್ಲಿ ಸನ್ ರೈಸ್ ಗ್ರೂಪ್ ಆಫ್ ಇನ್ಸ್ಟಿಟ್ಯೂಷನ್ ಸಿಂದನೂರು ಅಧ್ಯಕ್ಷರಾದ ಇರ್ಫಾನ್ ಕೆ ಅತ್ತಾರ್ ಅವರು ಮಾತನಾಡಿ, "ವಿದ್ಯಾರ್ಥಿಗಳಲ್ಲಿ ಉತ್ತಮ ನಾಯಕತ್ವ ಗುಣಗಳು ಬೆಳೆಸಿಕೊಳ್ಳಬೇಕು. ಸರಿಯಾದ ದಾರಿಯಲ್ಲಿ ನಡೆದು, ಸಹಪಾಠಿಗಳ ಸಮಸ್ಯೆಗಳನ್ನು ಆಲಿಸಲು ಸದಾ ಮುಂದಿರಬೇಕು.

ಆಡಳಿತ ಮಂಡಳಿ ವಿದ್ಯಾರ್ಥಿಗಳ




ಬೆಂಬಲಕ್ಕೆ ಸಿದ್ಧವಾಗಿದೆ" ಎಂದು ತಿಳಿಸಿದರು. ಕಾಲೇಜಿನ ಪ್ರಾಚಾರ್ಯರಾದ ಲಾಜರ್ ಸಿರಿಲ್ ಜಿ ಅವರು, "ವಿದ್ಯಾರ್ಥಿಗಳು ಈಗಿನಿಂದಲೇ ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಬೇಕು. ಭವಿಷ್ಯದಲ್ಲಿ ತಮ್ಮ ವೃತ್ತಿಜೀವನದಲ್ಲಿ ಸೂಕ್ತ ಸಮಯದಲ್ಲಿ ನಾಯಕತ್ವವನ್ನು ಪ್ರದರ್ಶಿಸುವುದು ಮುಖ್ಯ" ಎಂದು ಹೇಳಿದರು. ಒಟ್ಟಾರೆ, ಚುನಾವಣೆ ಯಶಸ್ವಿಯಾಗಿ ಮತ್ತು ಶಾಂತಿಯುತವಾಗಿ ನಡೆದಿದ್ದು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಹತ್ತು ವರ್ಷಗಳ ಸಂಪ್ರದಾಯ ಮುಂದುವರಿಸಿದ ಎಂಟನೇ ವಾರ್ಡಿನ ನಾಗರಿಕರು



ನೈಜ್ಯ ದೆಸೆ ನ್ಯೂಸ್

**ಬಳಗಾನೂರು: ಪಟ್ಟಣದ ಆರಾಧ್ಯ ದೈವ ಮಾರುತೇಶ್ವರನ ಜಾತ್ರೆ ಪ್ರಯುಕ್ತ ಶುಕ್ರವಾರ ಬೆಳಿಗ್ಗೆ ಪಟ್ಟಣದ ಎಂಟನೇ ವಾರ್ಡಿನ ನಾಗರಿಕರು ಹಾಗೂ ಯುವಕರು ವಿಶೇಷವಾಗಿ ಜಾತ್ರೆಗೆ ಸ್ವಾಗತ ಕೋರಿದರು.**

ವಾರ್ಡಿನ ಪ್ರಮುಖ ಸ್ಥಳದಲ್ಲಿರುವ ಮಾರುತೇಶ್ವರನ ರಥ ಹಾಗೂ ಮಾರುತಿ ದೇವರ ಭಾವಚಿತ್ರ ಅಳವಡಿಸಲಾದ ನಾಮಫಲಕಕ್ಕೆ ನೂತನ ಬ್ಯಾನರ್ ಕಟ್ಟುವ ಮೂಲಕ ಜಾತ್ರೆಯ ಸಂಭ್ರಮಕ್ಕೆ ಚಾಲನೆ ನೀಡಲಾಯಿತು. ಬಳಿಕ ನಾಮಫಲಕಕ್ಕೆ ಪೂಜೆ ಸಲ್ಲಿಸಿ, ಮಾಲಾರ್ಪಣೆ ಮಾಡಿ ಭಕ್ತಿಭಾವ ಮೆರೆದರು.ಈ ಸಂದರ್ಭದಲ್ಲಿ ನಾಗರಿಕರು ಮತ್ತು ಯುವಕರು ಒಗ್ಗಟ್ಟಿನಿಂದ ಸೇರಿ ಉತ್ಸಾಹಭರಿತ ಗುಂಪು ಭಾವಚಿತ್ರವನ್ನು ತೆಗೆಸಿಕೊಂಡು ಜಾತ್ರೆಗೆ ಹಾರ್ದಿಕ ಸ್ವಾಗತ ಕೋರಿದರು.

ಸುಮಾರು ಕಳೆದ ಹತ್ತು ವರ್ಷಗಳಿಂದ ಈ ಸಂಪ್ರದಾಯವನ್ನು ನಿರಂತರವಾಗಿ ಆಚರಿಸಿಕೊಂಡು ಬರುತ್ತಿರುವುದು ವಿಶೇಷವಾಗಿದ್ದು, ಜಾತ್ರೆಯ ಮೇಲಿನ ಭಕ್ತಿ ಹಾಗೂ ವಾರ್ಡಿನ ಜನರ ಒಗ್ಗಟ್ಟಿನ ಪ್ರತೀಕವಾಗಿ ಪರಿಣಮಿಸಿದೆ. ಈ ಸಂದರ್ಭದಲ್ಲಿ ವಾರ್ಡಿನ ಹಿರಿಯರು, ಯುವ ಮುಖಂಡರು, ಸಾರ್ವಜನಿಕರು ಉಪಸ್ಥಿತರಿದ್ದರು. **ವರದಿ, ಸುರೇಶ ಬಳಗಾನೂರು.**

## ಶಾಸಕ ದೊಡ್ಡನಗೌಡ ಹೆಚ್ ಪಾಟೀಲರಿಂದ ಪರಿಹಾರದ ಚೆಕ್ ವಿತರಣೆ

ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ತಾಲೂಕಿನ ಜಿ.ಬೆಂಚಮಟ್ಟಿ ಗ್ರಾಮದ ಜಮೀನಿನಲ್ಲಿ ಇತ್ತೀಚಿಗೆ ಸಿಡಿಲಿಗೆ ಮೃತಪಟ್ಟ ರೈತ ದೇವರಾಯನಗೌಡ ಪೋಲಿಸಪಾಟೀಲ ಮನೆಗೆ ಶಾಸಕ ದೊಡ್ಡನಗೌಡ ಪಾಟೀಲ**



ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿ ಸರ್ಕಾರದಿಂದ ?5 ಲಕ್ಷದ ಪರಿಹಾರ ಚೆಕ್ ವಿತರಿಸಿ ವೈಯಕ್ತಿಕ ಧನಸಹಾಯ ಮಾಡಿದರು. ಈ ಸಂದರ್ಭದಲ್ಲಿ ತಹಸೀಲ್ದಾರ್ಅಶೋಕ್ ಶಿಗ್ಗಾಂವಿ, ಜಿಪಂ ಮಾಜಿ ಸದಸ್ಯ ಕೆ. ಮಹೇಶ್, ಸಂಗನಗೌಡ ಜೈನರ್ಹಾಗೂ ಗ್ರಾಮದ ಹಿರಿಯರು ಪ್ರಮುಖರು ಇದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಕಾಯಕಕ್ಕೆ ದೈವತ್ವದ ಸ್ಥಾನವನ್ನು ನೀಡಿದ ಬಸವಾದಿ ಶರಣರ ಕೊಡುಗೆ ಅನನ್ಯ

ನೈಜ್ಯ ದೆಸೆ ನ್ಯೂಸ್

**ಅಂತಾರಾಷ್ಟ್ರೀಯ ಕಾರ್ಮಿಕ ದಿನವಾದ ಮೇ 1 ರಂದು ಶ್ರಮಜೀವಿಗಳ ಹಕ್ಕುಗಳು, ಪರಿಶ್ರಮ, ತ್ಯಾಗ, ಹೋರಾಟ ಮತ್ತು ಸಾಧನೆಗಳನ್ನು ಸ್ಮರಿಸಲು ಆಚರಿಸಲಾಗುತ್ತದೆ. ದಿನಕ್ಕೆ 8 ಗಂಟೆ ಕೆಲಸದ ಅವಧಿಯ ಆಗ್ರಹದೊಂದಿಗೆ ಆರಂಭವಾದ ಈ ದಿನವು ಕಾರ್ಮಿಕರ ಕೊಡುಗೆಯನ್ನು ಗೌರವಿಸುವ ಅಂತರರಾಷ್ಟ್ರೀಯ ಆಚರಣೆಯಾಗಿದೆ ಎಂದು ಸಾಮಾಜಿಕ ಕಾರ್ಯಕರ್ತ ಡಾ. ಶಿವಕುಮಾರ ಶರ್ಮಾ ಅವರು ಹೇಳಿದರು.**

ಕಲಬುರಗಿ ತಾಲೂಕಿನ ಫರಹತಾಬಾದ ಗ್ರಾಮ ಪಂಚಾಯತ ಮತ್ತು ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆ ಇವುಗಳ ವತಿಯಿಂದ ಶುಕ್ರವಾರ ಜರುಗಿದ ಅಂತಾರಾಷ್ಟ್ರೀಯ ಕಾರ್ಮಿಕ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ದುಡಿಯುವ ವರ್ಗ ನಿಕೃಷ್ಟ ದುಡಿಸಿಕೊಳ್ಳುವ ವರ್ಗ ಶ್ರೇಷ್ಠ ಎಂಬ



ಮನೋಭಾವನೆಯನ್ನು ಕಿತ್ತೆಸೆದು ಕಾಯಕಕ್ಕೆ ದೈವತ್ವದ ಸ್ಥಾನವನ್ನು ನೀಡಿದ ಬಸವಾದಿ ಶರಣರ ಕೊಡುಗೆ ಅನನ್ಯವಾಗಿದೆ. ಡಾ. ಬಿ. ಆರ್. ಅಂಬೇಡ್ಕರ್ ಅವರು ಕಾರ್ಮಿಕರ ಹಿತರಕ್ಷಣೆಗಾಗಿ ಸಂವಿಧಾನದ ಮೂಲಕ ಕಾರ್ಮಿಕರು ಎಂಟು ಗಂಟೆ ಮಾತ್ರ ಕೆಲಸ ಮಾಡಬೇಕು, ಕನಿಷ್ಠ ವೇತನ ಕಾಯ್ದೆ, ಕಾರ್ಮಿಕರಿಗೆ ತಾಂತ್ರಿಕ ತರಬೇತಿ ಒದಗಿಸುವ, ಸಮಾನ ಕೆಲಸಕ್ಕೆ ಸಮಾನ ವೇತನ, ಕಾರ್ಮಿಕ ಸಂಘಟನೆಗಳಿಗೆ ಮಾನ್ಯತೆ ನೀಡುವ, ಕಾರ್ಮಿಕರಿಗೆ ವೇತನಸಹಿತ ವಾರದ ರಜೆ ನೀಡುವ, ಕಾರ್ಮಿಕರಿಗೆ ಆರೋಗ್ಯ ವಿಮೆ ಕಡ್ಡಾಯಗೊಳಿಸುವ, ಮಹಿಳಾ ಕಾರ್ಮಿಕರಿಗೆ ಹೆರಿಗೆ ರಜೆ, ಭತ್ಯೆ, ಇನ್ನಿತರೆ ಸೌಲಭ್ಯಗಳನ್ನು ನೀಡುವ, ಮಹಿಳಾ ಕಾರ್ಮಿಕರಿಗಾಗಿ ಕಲ್ಯಾಣ ನಿಧಿ ಸ್ಥಾಪಿಸುವ ಇವೇ ಮುಂತಾದ ಕಾನೂನುಗಳನ್ನು ನೀಡಿದ್ದಾರೆಂದು ತಿಳಿಸಿದರು.

ಪ್ರಸ್ತುತ ಕಾರ್ಮಿಕರಿಗೆ ನ್ಯಾಯಸಮ್ಮತ ಹಕ್ಕುಗಳು ಸಿಗುತ್ತಿಲ್ಲ. ಎಲ್ಲಾ ಕ್ಷೇತ್ರಗಳ ಕಾರ್ಮಿಕರು ಸಂಘಟಿತರಾಗಿ ತಮ್ಮ ಹಕ್ಕುಗಳಿಗಾಗಿ ಹೋರಾಟ ನಡೆಸಬೇಕಾಗಿದೆ ಎಂದು ಹೇಳಿದರು. ಗ್ರಾಮ ಪಂಚಾಯತ ಕಾರ್ಯದರ್ಶಿ ಕಿರಣಕುಮಾರ್ ಅವರು ಮಾತನಾಡಿ, ಕಾರ್ಮಿಕರು ವಿವಿಧ ಇಲಾಖೆಗಳಲ್ಲಿ ಸಿಗುವ ಸೌಲಭ್ಯಗಳನ್ನು ಪಡೆದು ಸಾಮಾಜಿಕವಾಗಿ - ಆರ್ಥಿಕವಾಗಿ ಮುಂದೆ ಬರಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆಯ ಪವಿತ್ರಾ ನಿಂಬರಗಿ, ಶಾಂತಾ ನೀಲೂರು, ಗ್ರಾಮ ಪಂಚಾಯತ ಮಾಜಿ ಸದಸ್ಯ ಸಂತೋಷ ತಳವಾರ, ಪಂಚಾಯತ ಸಿಬ್ಬಂದಿ ಸೇರಿದಂತೆ ನೂರಾರು ಕಾರ್ಮಿಕರು ಉಪಸ್ಥಿತರಿದ್ದರು.

## ಹೈದರಾಬಾದ್ ಮತ್ತು ಕಲಬುರಗಿ ನಡುವೆ 4 ವಿಶೇಷ ರೈಲುಗಳು

ನೈಜ್ಯ ದೆಸೆ ನ್ಯೂಸ್

**ಕಲಬುರಗಿ: ಸೋಲಾಪುರ ರೈಲ್ವೆ ವಿಭಾಗವು ಕಲಬುರಗಿಯ ಸಂತ ಖ್ವಾಜಾ ಬಂದಾ ನವಾಜರ ಉರ್ಸ್-ಇ-ಶರೀಫ್ 2026 ಗಾಗಿ ಹೈದರಾಬಾದ್ ಮತ್ತು ಕಲಬುರಗಿ ನಡುವೆ 4 ವಿಶೇಷ ರೈಲುಗಳನ್ನು ಓಡಿಸಲಿದೆ ಎಂದು ಸೋಲಾಪುರ ವಿಭಾಗದ ಸಾರ್ವಜನಿಕ ಸಂಪರ್ಕ ಇಲಾಖೆಯು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.**

ಹೈದರಾಬಾದ್-ಕಲಬುರಗಿ ಉರ್ಸ್ ವಿಶೇಷ ರೈಲುಗಳು (4 ಟ್ರಿಪ್‌ಗಳು) ರೈಲು ಸಂಖ್ಯೆ 07177 ವಿಶೇಷ ರೈಲುಗಳು 02.05.2026 ಮತ್ತು 05.05.2026 ರಂದು




23:55 ಗಂಟೆಗೆ ಹೈದರಾಬಾದಿನಿಂದ ಹೊರಟು ಮರುದಿನ 07:00 ಗಂಟೆಗೆ ಕಲಬುರಗಿಗೆ ಆಗಮಿಸುತ್ತವೆ. (2 ಟ್ರಿಪ್‌ಗಳು) ರೈಲು ಸಂಖ್ಯೆ 07178 ಕಲಬುರಗಿಯಿಂದ 03.05.2026 ಮತ್ತು 06.05.2026 ರಂದು ಬೆಳಿಗ್ಗೆ 07:40 ಕ್ಕೆ ಹೊರಟು ಅದೇ ದಿನ ಮಧ್ಯಾಹ್ನ 2:00 ಕ್ಕೆ ಹೈದರಾಬಾದ್‌ಗೆ ಆಗಮಿಸುತ್ತದೆ. (2 ಟ್ರಿಪ್‌ಗಳು) ನಿಲುಗಡೆಗಳು: ಬೇಗಂಪೇಟ್, ಸನತನಗರ, ಹಫೀಜ್‌ಪೇಟೆ, ಲಿಂಗಂಪಳ್ಳಿ, ಶಂಕರಪಲ್ಲಿ, ವಿಕಾರಾಬಾದ್, ತಾಂಡೂರ್, ಸೇಡಂ, ಮಳಖೇಡ ರಸ್ತೆ, ಚಿತ್ತಾಪುರ ಮತ್ತು ವಾಡಿ. ಸಂಯೋಜನೆ: 2 ಸ್ಲೀಪರ್ ಕ್ಲಾಸ್, 2 ಲಗೇಜ್ ಕಮ್ ಗಾರ್ಡ್‌ನ ಬ್ರೇಕ್ ವ್ಯಾನ್‌ಗಳು ಸೇರಿದಂತೆ 14 ಎರಡನೇ ದರ್ಜೆಯ ಸಿಟ್ಟಿಂಗ್. (16 ಕೋಚ್‌ಗಳು) ಮೀಸಲಾತಿ ಮತ್ತು ಬುಕಿಂಗ್: ವಿಶೇಷ ಶುಲ್ಕದ ಮೇಲೆ ವಿಶೇಷ ರೈಲುಗಳ ಪ್ರಯಾಣಕ್ಕಾಗಿ ಕಾಯ್ದಿರಿಸುವಿಕೆಗಳು ಎಲ್ಲಾ ಗಣಕೀಕೃತ ಮೀಸಲಾತಿ ಕೇಂದ್ರಗಳಲ್ಲಿ ಮತ್ತು ತಿತಿತಿ.ಎಡಿಭಿಣಛಿ.ಛಿ೦.ಟಿ ವೆಬ್‌ಸೈಟ್‌ನಲ್ಲಿ ಲಭ್ಯವಿರುತ್ತವೆ. ಮೀಸಲಾತಿ ಇಲ್ಲದ ಕೋಚ್‌ಗಳ ಬುಕಿಂಗ್‌ಗಳನ್ನು ನಿಲ್ದಾಣಗಳಲ್ಲಿನ ಬುಕಿಂಗ್ ಕೌಂಟರ್‌ಗಳು ಮತ್ತು ರೈಲ್‌ಒನ್ ಅಪ್ಲಿಕೇಶನ್ ಮೂಲಕವೂ ಮಾಡಬಹುದು. ಅನಾನುಕೂಲತೆಯನ್ನು ತಪ್ಪಿಸಲು ಪ್ರಯಾಣಿಕರು ಟಿಕೆಟ್‌ಗಳೊಂದಿಗೆ ಪ್ರಯಾಣಿಸಲು ವಿನಂತಿಸಲಾಗಿದೆ. ಈ ವಿಶೇಷ ರೈಲುಗಳ ನಿಲುಗಡೆಗಳ ವಿವರವಾದ ಸಮಯಕ್ಕಾಗಿ ದಯವಿಟ್ಟು www.enquiry.indianrail.gov.in ಗೆ ಭೇಟಿ ನೀಡಿ ಅಥವಾ ಖಚಿಟಔಟಿಜ ಅಪ್ಲಿಕೇಶನ್ ಅಥವಾ ಓಖಿಇಖ ಅಪ್ಲಿಕೇಶನ್ ಡೌನ್‌ಲೋಡ್ ಮಾಡಿ.

## ಮೊಬೈಲ್‌ನಲ್ಲಿ ಸೈರನ್ ಮೊಳಗಿದರೆ ಭಯಬೇಡ ಇದು ತುರ್ತು ಎಚ್ಚರಿಕೆ ಸಂದೇಶ

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ದೇಶದಾದ್ಯಂತ ಅನೇಕ ಮೊಬೈಲ್ ಬಳಕೆದಾರರು ತಮ್ಮ ಪರದೆಯ ಮೇಲೆ "ಅತ್ಯಂತ ಗಂಭೀರ" ಎಂಬ ಜೋರಾದ ಎಚ್ಚರಿಕೆ ನೋಡಿ ಆಶ್ಚರ್ಯಚಕಿತದ ಜೊತೆಗೆ ಗಾಬರಿಯಾದ ಘಟನೆ ಇಂದು ನಡೆದಿದೆ. ಇದು ಕೇವಲ ಒಂದು ಪರೀಕ್ಷೆ ಎಂಬ ಸಂದೇಶವನ್ನು ಕೇಂದ್ರ ಸರ್ಕಾರ ಸ್ಪಷ್ಟಪಡಿಸುವ ಮೊದಲು ಕ್ಷಣಿಕ ಭಯದ ವಾತಾವರಣಕ್ಕೆ ಕಾರಣವಾಗಿತ್ತು.**

ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರವು ಇಂದು 'ಸೆಲ್ ಬ್ರಾಡ್‌ಕಾಸ್ಟಿಂಗ್ ಅಲರ್ಟ್' ತಾಂತ್ರಿಕ ಪರೀಕ್ಷೆ ನಡೆಸಿತು. ನಿಮ್ಮ ಮೊಬೈಲ್‌ಗೆ ಈ ಸಂದೇಶ ಬಂದಾಗ, ಯಾರು ಆತಂಕಕ್ಕೆ ಒಳಗಾಗಬಾರದು ಎಂಬ ವಿವರ ಇರುವ ತುರ್ತು ಸಂದೇಶ ಬಿತ್ತರವಾಯಿತು ಭಾರತ ಸರ್ಕಾರ ಹೊರಡಿಸಿದ ಅಧಿಸೂಚನೆಯಲ್ಲಿ, ಸ್ಥಳೀಯ ತಂತ್ರಜ್ಞಾನ ಬಳಸಿಕೊಂಡು




ಅಭಿವೃದ್ಧಿಪಡಿಸಲಾದ ಸೆಲ್ ಪ್ರಸಾರ ಆಧಾರಿತ ವಿಪತ್ತು ಎಚ್ಚರಿಕೆ ವ್ಯವಸ್ಥೆಯನ್ನು ಜಾರಿಗೆ ತರುವುದಾಗಿ ಘೋಷಿಸಲಾಗಿದೆ.

ನೈಸರ್ಗಿಕ ವಿಕೋಪಗಳಿಂದ ಹಿಡಿದು ಸಾರ್ವಜನಿಕ ಸುರಕ್ಷತಾ ಬೆದರಿಕೆಗಳವರೆಗೆ ನೈಜ-ಸಮಯದ ತುರ್ತು ಎಚ್ಚರಿಕೆಗಳನ್ನು ನೇರವಾಗಿ ನಾಗರಿಕರ ಮೊಬೈಲ್ ಫೋನ್‌ಗಳಿಗೆ ಕಳುಹಿಸಲು ಈ ವ್ಯವಸ್ಥೆಯನ್ನು ವಿನ್ಯಾಸಗೊಳಿಸಲಾಗಿದೆ ಎಂದು ಮಾಹಿತಿ ನೀಡಿದೆ. ಈ ಸಂದೇಶ ಬಳಕೆದಾರರಿಗೆ ಯಾವುದೇ ಕ್ರಮದ ಅಗತ್ಯವಿಲ್ಲ ಎಂದು ಭರವಸೆ ನೀಡಿತು, ಇದು ಪ್ರಾಯೋಗಿಕ ಚಾಲನೆ ಎಂದು ಸ್ಪಷ್ಟವಾಗಿ ತಿಳಿಸಿದೆ. ಆದಾಗ್ಯೂ, ಎಚ್ಚರಿಕೆಯೊಂದಿಗೆ ಸಂಬಂಧಿಸಿದ ಹಠಾತ್, ಹೆಚ್ಚಿನ ಆದ್ಯತೆಯ ಧ್ವನಿ ಮತ್ತು ಕಂಪನ ಅನೇಕರನ್ನು ಬೆಚ್ಚಿಬೀಳಿಸಿದೆ. ಸಾಮಾಜಿಕ ಮಾಧ್ಯ ತ್ವರಿತವಾಗಿ ಪ್ರತಿಕ್ರಿಯೆಗಳು, ಸ್ಕ್ರೀನ್‌ಶಾಟ್‌ಗಳು ಮತ್ತು ಗೊಂದಲಗಳಿಂದ ತುಂಬಿ ತುಳುಕಾಡಿದೆ. ಕನ್ನಡ, ಇಂಗ್ಲಿಷ್ ಭಾಷೆಯಲಿ ಕಳುಹಿಸಲಾದ ದ್ವಿಭಾಷಾ ಎಚ್ಚರಿಕೆ ವಿಪತ್ತು ಸನ್ನದ್ಧತೆ,ಬಲಪಡಿಸುವತ್ತ ಸರ್ಕಾರದ ಗಮನ ಹರಿಸಿದೆ. ಎಚ್ಚರ ನಾಗರಿಕರು, ಸುರಕ್ಷಿತ ರಾಷ್ಟ್ರ." ಸಾಂಪ್ರದಾಯಿಕ ಸಂವಹನ ಮಾರ್ಗಗಳು ವಿಫಲಗೊಳ್ಳಬಹುದಾದ ಪ್ರದೇಶಗಳಲ್ಲಿಯೂ ಸಹ, ತುರ್ತು ಸಂದರ್ಭಗಳಲ್ಲಿ ಕೊನೆಯ ಮೈಲಿ ಸಂಪರ್ಕವನ್ನು ಖಚಿತಪಡಿಸಿಕೊಳ್ಳುವಲ್ಲಿ ಈ ವ್ಯವಸ್ಥೆಯು ನಿರ್ಣಾಯಕ ಪಾತ್ರ ವಹಿಸುತ್ತದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಎಸ್ ಎಂ ಎಸ್ ಎಚ್ಚರಿಕೆಗಳಿಗಿಂತ ಭಿನ್ನವಾಗಿ, ಸೆಲ್ ಪ್ರಸಾರ ಸಂದೇಶಗಳು ಸ್ಥಳ-ಆಧಾರಿತ ಮತ್ತು ನೆಟ್‌ವರ್ಕ್-ಸ್ವತಂತ್ರವಾಗಿರುತ್ತವೆ, ಅಂದರೆ ದಟ್ಟಣೆ ಅಥವಾ ವಿಳಂಬವಿಲ್ಲದೆ ಏಕಕಾಲದಲ್ಲಿ ಹೆಚ್ಚಿನ ಸಂಖ್ಯೆಯ ಬಳಕೆದಾರರನ್ನು ತಲುಪಬಹುದು ಎನ್ನುವುದು ಕೇಂದ್ರ ಸರ್ಕಾರದ ಎಚ್ಚರಿಕೆಯ ಸಂದೇಶವಾಗಿದೆ. ದೂರಸಂಪರ್ಕ ಇಲಾಖೆ,

ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಹಯೋಗದೊಂದಿಗೆ, ತನ್ನ ನಾಗರಿಕರಿಗೆ ನಿರ್ಣಾಯಕ ಮಾಹಿತಿಯನ್ನು ಸಕಾಲಿಕವಾಗಿ ಪ್ರಸಾರ ಮಾಡುವುದನ್ನು ಖಚಿತಪಡಿಸಿಕೊಳ್ಳಲು ದೇಶಾದ್ಯಂತ ಮೊಬೈಲ್ ಆಧಾರಿತ ವಿಪತ್ತು ಸಂವಹನ ವ್ಯವಸ್ಥೆಯ ಭಾಗ ಇದಾಗಿದೆ ಎಂದು ಹೇಳಿದೆ. ಈ ವ್ಯವಸ್ಥೆಯು ವಿಶ್ವಸಂಸ್ಥೆಯ ಅಂತರರಾಷ್ಟ್ರೀಯ ದೂರಸಂಪರ್ಕ ಒಕ್ಕೂಟದ ಶಿಫಾರಸು ಮಾಡಿದಂತೆ ಸಾಮಾನ್ಯ ಎಚ್ಚರಿಕೆ ಪ್ರೋಟೋಕಾಲ್ ಅನ್ನು ಆಧರಿಸಿದೆ. ಇದು ಪ್ರಸ್ತುತ ಭಾರತದ ಎಲ್ಲಾ 36 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿದೆ ಮತ್ತು ಭೌಗೋಳಿಕ-ಗುರಿ ಪ್ರದೇಶಗಳಲ್ಲಿ ಮೊಬೈಲ್ ಬಳಕೆದಾರರಿಗೆ ಎಸ್ ಎಂಎಸ್ ಮೂಲಕ ವಿಪತ್ತು ಮತ್ತು ತುರ್ತು-ಸಂಬಂಧಿತ ಎಚ್ಚರಿಕೆ ನೀಡುತ್ತದೆ ಎಂದು ಹೇಳಿದೆ.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101 KARNATAKA, EDITOR BY: IRFAN K PH NO.